ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೧**

**ಒಟ್ಟು ಪ್ರಶ್ನೆಗಳು – ೬೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಸೋಮವಾರ, ದಿನಾಂಕ : ೦೭ನೇ ಜುಲೈ, ೨೦೧೪**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

03372-I

## ವೈದ್ಯಕೀಯ ಡೀಮ್ಡ್ ವಿಶ್ವವಿದ್ಯಾಲಯ ಕಾಮೆಡ್-ಕೆ ಮತ್ತು ಭಾಷಾ ಅಲ್ಪಸಂಖ್ಯಾತರ ಕಾಲೇಜುಗಳು

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೩೮ (೮೪೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವೈದ್ಯಕೀಯ ಡೀಮ್ಡ್ ವಿಶ್ವವಿದ್ಯಾಲಯ ಕಾಮೆಡ್-ಕೆ ಮತ್ತು ಭಾಷಾ ಅಲ್ಪಸಂಖ್ಯಾತರ ಕಾಲೇಜುಗಳು ಎಷ್ಟು ;

(ಆ) ೨೦೧೦ರಿಂದಲೂ ವೈದ್ಯಕೀಯ ಸ್ನಾತಕೋತ್ತರ ಪದವಿಯ ಕಾಲೇಜುಗಳು ಸರ್ಕಾರಿ ಕೋಟಾದಡಿ ಶೇ.೨೫ರಷ್ಟು ವಿದ್ಯಾರ್ಥಿಗಳಿಗೆ ಲಭ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಸರ್ಕಾರೇತರ ಸ್ನಾತಕೋತ್ತರ ವೈದ್ಯಕೀಯ ಕಾಲೇಜುಗಳ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ?

## ಹೈ-ಪವರ್ ಕಮಿಟಿ ರಚನೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೩೯ (೩೫೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ನೌಕರರ ನೇಮಕ ಹಾಗೂ ಮುಂಬಡ್ತಿಯಲ್ಲಿ ಅನ್ಯಾಯವಾಗದಂತೆ ರಕ್ಷಣೆ ಮಾಡಲು ಉನ್ನತಾಧಿಕಾರ ಸಮಿತಿ (High Power Committee) ರಚನೆ ಮಾಡಿ ಎಷ್ಟು ವರ್ಷಗಳಾಗಿದೆ;

(ಆ) ಈ ಬಗ್ಗೆ ಪರಿಶೀಲಿಸಲು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಎಷ್ಟು ಸಾರಿ ಸಭೆ ಕರೆಯಲಾಗಿದೆ ;

(ಇ) ಗೃಹ ಇಲಾಖೆ ಹಾಗೂ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ನೌಕರರಿಗೆ ಕೊಡುವ ಮುಂಬಡ್ತಿಯಲ್ಲಿ ಅನ್ಯಾಯವಾಗಿರುವುದು ಉನ್ನತಾಧಿಕಾರ ಸಮಿತಿಯ (High Power Committee) ಗಮನಕ್ಕೆ ಬಂದಿದೆಯೇ;

(ಈ) ಮಾನಿಟರ್ ಸೆಲ್ ಈ ಬಗ್ಗೆ ಏಕೆ ಗಮನ ಹರಿಸುತ್ತಿಲ್ಲ ?

## ಪರಿಶಿಷ್ಟ ವರ್ಗದ ಜನರಿಗೆ ಸ್ವಯಂ ಉದ್ಯೋಗ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೪೦ (೮೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿನ ಪರಿಶಿಷ್ಟ ವರ್ಗಗಳ ಕುಟುಂಬದ ಸದಸ್ಯರಿಗೆ ಸ್ವಯಂ ಉದ್ಯೋಗಕ್ಕಾಗಿ ಸರ್ಕಾರವು ಯಾವ ಯಾವ ಸೌಲಭ್ಯಗಳನ್ನು ನೀಡುತ್ತಿದೆ ; ಈ ಬಗ್ಗೆ ಒದಗಿಸಲಾದ ಅನುದಾನ ಮತ್ತು ವೆಚ್ಚದ ವಿವರಗಳನ್ನು ನೀಡುವುದು ;

(ಆ) ಸದರಿ ಜಿಲ್ಲೆಗಳಲ್ಲಿ ಪರಿಶಿಷ್ಟ ವರ್ಗದವರಿಗಾಗಿ ಕುಡಿಯುವ ನೀರಿಗಾಗಿ ಎಷ್ಟು ಕೊಳವೆ ಬಾವಿಗಳನ್ನು ನಿರ್ಮಿಸಲಾಗಿದೆ ; ಈ ವರ್ಗದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಯಾವ ಹೆಚ್ಚಿನ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಸದರಿ ಜಿಲ್ಲೆಗಳಲ್ಲಿ ಪರಿಶಿಷ್ಟ ವರ್ಗಗಳ ಕಾಲೋನಿಗಳಲ್ಲಿ ಈವರೆಗೆ ಎಷ್ಟು ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ (ವಿವರಗಳನ್ನು ನೀಡುವುದು) ?

## ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಯೋಜನೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೪೧ (೮೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಯೋಜನೆಯನ್ನು ಜಾರಿ ಮಾಡುವಲ್ಲಿ ಪ್ರಾದೇಶಿಕ ಅಸಮಾನತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕದಲ್ಲಿ ಕಡಿಮೆ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಹೆಚ್ಚಿಸಿ ಪ್ರಾದೇಶಿಕ ಅಸಮತೋಲನವನ್ನು ಸರಿದೂಗಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದೇ ;

(ಇ) ಜನಸಂಖ್ಯೆ ಆಧಾರದ ಮೇರೆಗೆ, ಸೌಲಭ್ಯ ಅಗತ್ಯವಿರುವ ಆರೋಗ್ಯ ಕೇಂದ್ರಗಳನ್ನು ಉನ್ನತೀಕರಿಸಿ, ಅಗತ್ಯ ಸಿಬ್ಬಂದಿ ನಿಯೋಜಿಸಿ, ಸ್ಥಳೀಯರ ಬೇಡಿಕೆಗಳನ್ನು ಈಡೇರಿಸಲು ಎಲ್ಲಾ ತಾರತಮ್ಯಗಳನ್ನು ಸರಿಪಡಿಸಲಾಗುವುದೇ ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೬೪೨ (೮೦೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ ;-

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳೆಷ್ಟು (ಜಿಲ್ಲಾವಾರು ಮಾಹಿತಿ ಒದಗಿಸುವುದು) ;

(ಆ) ಹೊಸದಾಗಿ ಪ್ರಾರಂಭಿಸಲಾಗುತ್ತಿರುವ ಸರ್ಕಾರಿ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು) ;

(ಇ) ಹೊಸದಾಗಿ ಪ್ರಾರಂಭಿಸಲಾಗುತ್ತಿರುವ ಕಾಲೇಜುಗಳಿಗೆ ಭಾರತೀಯ ವೈದ್ಯಕೀಯ ಪರಿಷತ್ (ಎಂಸಿಐ) ಅನುಮೋದನೆ ನೀಡಿದೆಯೇ (ವಿವರ ನೀಡುವುದು) ;

(ಈ) ಈ ಎಲ್ಲಾ ಕಾಲೇಜುಗಳು ಪ್ರಾರಂಭಿಸಿದರೆ ಎಷ್ಟು ಸೀಟುಗಳು ಲಭ್ಯವಾಗಲಿವೆ ; ಈ ಸೀಟುಗಳ ಪೈಕಿ ೩೭೧ನೇ ಕಲಂ ಅನ್ವಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಎಷ್ಟು ಸೀಟು ದೊರೆಯಲಿದೆ ; ಈ ಪ್ರದೇಶ ಬಿಟ್ಟು ರಾಜ್ಯದ ಇತರೆ ಕಾಲೇಜುಗಳಲ್ಲಿ ೩೭೧ನೇ ಕಲಂ ಮೀಸಲಾತಿ ಪ್ರಕಾರ ದೊರೆಯುವ ಸೀಟುಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯರುಗಳಿಂದ ಕಡ್ಡಾಯವಾಗಿ ಸೇವೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೬೪೩ (೮೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ನೇಮಿಸಿದ ವೈದ್ಯರು ಕಡ್ಡಾಯವಾಗಿ ಸೇವೆ ಸಲ್ಲಿಸುತ್ತಿದ್ದಾರೆಯೇ ; ನೇಮಿಸಿಕೊಂಡ ವೈದ್ಯರಲ್ಲಿ ಸೇವೆಗೆ ಗೈರುಹಾಜರಾದ ವೈದ್ಯರೆಷ್ಟು; ಸರ್ಕಾರ ಅಂತಹ ವೈದ್ಯರ ವಿರುದ್ಧ ತೆಗೆದುಕೊಂಡ ಕ್ರಮಗಳೇನು (ಹೈ.ಕ. ಭಾಗದ ಪ್ರತ್ಯೇಕವಾಗಿ ವಿವರ ನೀಡುವುದು) ;

(ಆ) ವೈದ್ಯಕೀಯ ಶಿಕ್ಷಣ ಪಡೆದ ಎಲ್ಲಾ ವೈದ್ಯರನ್ನು ಕಡ್ಡಾಯವಾಗಿ ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸೇವೆ ಸಲ್ಲಿಸುವಂತೆ ಕಾನೂನಿನ ತಿದ್ದುಪಡಿ ತರಲು ಸರ್ಕಾರ ಯೋಚಿಸಿದೆಯೇ ; ಇಲ್ಲದಿದ್ದಲ್ಲಿ, ಗ್ರಾಮೀಣ ಪ್ರದೇಶದ ಜನತೆ ವೈದ್ಯಕೀಯ ಸೇವೆಯಿಂದ ವಂಚಿತರಾಗಬೇಕೆ ; ಇದಕ್ಕೆ ಸರ್ಕಾರದ ಪರಿಹಾರವೇನು (ವಿವರಿಸುವುದು) ;

(ಇ) ಹೈ.ಕ. ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಂಪೂರ್ಣ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಒಂದು ವೇಳೆ ಕೊರತೆ ಇರುವ ಕೇಂದ್ರಗಳಿಗೆ ತಕ್ಷಣ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಎ.ಪಿ.ಎಲ್. ಕುಟುಂಬಗಳಿಗೆ ಶಸ್ತ್ರ ಚಿಕಿತ್ಸಾ ವೆಚ್ಚ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೬೪೪ (೮೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಎಪಿಎಲ್ ಕುಟುಂಬಗಳಿಗೆ ಶಸ್ತ್ರ ಚಿಕಿತ್ಸಾ ವೆಚ್ಚ ಭರಿಸುವ ರಾಜ್ಯ ಸರ್ಕಾರದ ಯೋಜನೆಗಳು ಮತ್ತು ಗುರುತಿಸಲಾದ ಆಸ್ಪತ್ರೆಗಳು ಯಾವುವು (ಜಿಲ್ಲಾವಾರು ವಿವರ ನೀಡುವುದು) ;

(ಆ) ಸಂತ್ರಸ್ತ ಕುಟುಂಬಗಳು ಸರ್ಕಾರದ ಸೌಲಭ್ಯ ಪಡೆದುಕೊಳ್ಳಲು ಇರುವ ಮಾನದಂಡಗಳೇನು ;

(ಇ) ಇಲ್ಲಿಯವರೆಗೆ ಎಷ್ಟು ಎಪಿಎಲ್ ಕುಟುಂಬಗಳು ಈ ಯೋಜನೆಯ ಲಾಭ ಪಡೆದುಕೊಂಡಿವೆ (ಜಿಲ್ಲಾವಾರು ವಿವರ ನೀಡುವುದು) ;

(ಈ) ಈ ಯೋಜನೆಯ ಲಾಭ ಪಡೆದುಕೊಳ್ಳಲು ರಾಜ್ಯಾದ್ಯಂತ ವ್ಯಾಪಕ ಪ್ರಚಾರ ಕೈಗೊಳ್ಳಲು ಸರ್ಕಾರವು ಅನುಸರಿಸಿದ ಕ್ರಮಗಳೇನು (ವಿವರ ನೀಡುವುದು) ?

## ಜಿಲ್ಲಾ ಆಸ್ಪತ್ರೆ ಕಟ್ಟಡ ಕಾಮಗಾರಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೪೫ (೮೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:--

(ಅ) ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾ ಆಸ್ಪತ್ರೆ (ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ) ಕಟ್ಟಡದ ಕಾಮಗಾರಿ ಪೂರ್ಣಗೊಂಡಿದೆಯೇ ; ಯಾವಾಗ ಪೂರ್ಣಗೊಳ್ಳಲಿದೆ ; ಇಲ್ಲದಿದ್ದಲ್ಲಿ, ಯಾವ ಹಂತದಲ್ಲಿದೆ (ವಿವರ ನೀಡುವುದು) ;

(ಆ) ಈ ಆಸ್ಪತ್ರೆ ಮೂಲಭೂತ ಸೌಕರ್ಯಕ್ಕಾಗಿ ಎಷ್ಟು ಹಣ ಮೀಸಲಿಡಲಾಗಿದೆ (ಅವುಗಳ ವಿವರ ನೀಡುವುದು) ;

(ಇ) ಚಿಕಿತ್ಸಾ ಪರಿಕರಗಳನ್ನು ಈಗಾಗಲೇ ಅಳವಡಿಸಲಾಗಿದೆಯೇ ; ಯಾವಾಗ ಅಳವಡಿಸಲಾಗಿದೆ (ವಿವರ ನೀಡುವುದು) ;

(ಈ) ಜಿಲ್ಲಾ ಆಸ್ಪತ್ರೆಯ ನೂತನ ಕಟ್ಟಡ ಯಾವಾಗ ಉದ್ಘಾಟನೆಗೊಂಡು ಸಾರ್ವಜನಿಕರ ಅನುಕೂಲಕ್ಕೆ ಅನುವು ಮಾಡಿಕೊಡಲಾಗುತ್ತದೆ ?

## ತಾಯಂದಿರ ಮತ್ತು ಶಿಶುಗಳ ಮರಣ ತಡೆಗಟ್ಟಲು ಮುಂಜಾಗ್ರತ ಕ್ರಮ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೪೬. (೮೧೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩ ಜನವರಿಯಿಂದ ಇಲ್ಲಿಯವರೆಗೆ ಬಳ್ಳಾರಿ ಜಿಲ್ಲೆಯಲ್ಲಿ ಜನಿಸಿದ ಶಿಶುಗಳ ಸಂಖ್ಯೆ ಎಷ್ಟು ;

(ಆ) ಇದೇ ಅವಧಿಯಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ಹೆರಿಗೆ ಸಮಯದಲ್ಲಿ ಮೃತಪಟ್ಟ ತಾಯಂದಿರ ಮತ್ತು ಶಿಶುಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಹೆರಿಗೆ ಸಮಯದಲ್ಲಿ ಶಿಶುಗಳ ಮತ್ತು ತಾಯಂದಿರ ಮರಣ ತಡೆಗಟ್ಟಲು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಇಂತಹ ಹೆರಿಗೆ ಸಮಯದಲ್ಲಿ ಮರಣ ಹೊಂದಲು ಯಾರ ನಿರ್ಲಕ್ಷತನಗಳು ಕಾರಣಗಳಾಗಿವೆ ?

## ಸಾರಿಗೆ ಸಂಸ್ಥೆಗಳಲ್ಲಿ ಖಾಲಿ ಇರುವ ಅಧಿಕಾರಿ/ಸಿಬ್ಬಂದಿ ಹುದ್ದೆ

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೪೭ (೮೬೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಾಲ್ಕೂ ವಲಯಗಳಲ್ಲಿ ಖಾಲಿ ಇರುವ ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳು ಎಷ್ಟು (ವಿಭಾಗವಾರು) ;

(ಆ) ನೇಮಕಾತಿ ಸಂದರ್ಭದಲ್ಲಿ ಆಯ್ಕೆಗೊಂಡ ಅಧಿಕಾರಿ/ ಸಿಬ್ಬಂದಿಗಳನ್ನು ನಾಲ್ಕೂ ವಲಯಗಳಿಗೆ ಸಮನಾಗಿ ಹಂಚಿಕೆ ಮಾಡಲಾಗಿದೆಯೇ ;

(ಇ) ಈಶಾನ್ಯ ಹಾಗೂ ವಾಯವ್ಯ ಸಂಸ್ಥೆಗಳಲ್ಲಿ ಕೆಲವು ವರ್ಷಗಳಿಂದ ಇಲಾಖಾ ಮುಖ್ಯಸ್ಥರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಬಂದಿದ್ದಲ್ಲಿ, ಈ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮಗಳೇನು ?

**ಪ್ರಾಥಮಿಕ ಆರೋಗ್ಯ ಕೇಂದ್ರಗಳ ಚಿಕಿತ್ಸಾ ಸೌಲಭ್ಯಗಳು**

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೪೪೮ (೮೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಈ ಕೇಂದ್ರಗಳಲ್ಲಿ ಅಗತ್ಯ ಸಿಬ್ಬಂದಿ ನೇಮಕ ಆಗಿದೆಯೆ ;

(ಇ) ಈ ಕೇಂದ್ರಗಳಿಗೆ ನಿಗದಿಪಡಿಸಿರುವ ಕನಿಷ್ಠ ಚಿಕಿತ್ಸಾ ಪರಿಕರಗಳು ಹಾಗೂ ಔಷಧಿಗಳನ್ನು ಪೂರೈಸಲಾಗಿದೆಯೇ ;

(ಈ) ಗ್ರಾಮೀಣ ಭಾಗದ ಆರೋಗ್ಯ ಕೇಂದ್ರಗಳಲ್ಲಿ ಪ್ರಾಣಿ–ಜಂತುಗಳು ಕಡಿದ ಸಂದರ್ಭದಲ್ಲಿ ಪ್ರಥಮ ಚಿಕಿತ್ಸೆ ನೀಡುವ ಸೌಲಭ್ಯ ಸಮರ್ಪಕವಾಗಿದೆಯೆ ?

03372-2

## ವೈದ್ಯ ವಿಜ್ಞಾನದ ಮೂಲ ಗ್ರಂಥಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೬೪೯ (೮೧೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುರ್ವೇದ ವೈದ್ಯ ವಿಜ್ಞಾನ, ಹೋಮಿಯೋಪತಿ ವೈದ್ಯ ವಿಜ್ಞಾನ, ಯುನಾನಿ ವೈದ್ಯ ವಿಜ್ಞಾನದ ಮೂಲ ಗ್ರಂಥಗಳು ಯಾವ ಭಾಷೆಯಲ್ಲಿವೆ (ವಿವರಿಸುವುದು) ;

(ಆ) ಇತ್ತೀಚೆಗೆ ಆಯುಷ್ ಇಲಾಖೆಗೆ ಸಂಬಂಧಪಟ್ಟ ವೈದ್ಯ ವಿಜ್ಞಾನದಲ್ಲಿ ಕೆಲವು ಭಾಷೆಗಳ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಕಾರಣವೇನು (ವಿವರಿಸುವುದು) ;

(ಇ) ಈ ನಿಯಮ ಆಯುರ್ವೇದ ಮತ್ತು ಹೋಮಿಯೋಪತಿ ವೈದ್ಯ ವಿಜ್ಞಾನಕ್ಕೂ ಇದೆಯೋ ; ಇಲ್ಲವಾದಲ್ಲಿ ಕಾರಣವೇನು ?

## ಗಿರಿಜನ ಹಾಡಿಗಳಿಗೆ ಮೂಲಭೂತ ಸೌಲಭ್ಯ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) ( ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೫೦ (೮೧೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಯಲ್ಲಿರುವ ಗಿರಿಜನರ ಪೋಡಿಗಳು/ಹಾಡಿಗಳು ಎಷ್ಟು ; ಅವು ಯಾವುವು (ಪೂರ್ತಿ ವಿವರವನ್ನು ತಾಲ್ಲೂಕುವಾರು ನೀಡುವುದು) ;

(ಆ) ಈ ಪೋಡಿ/ಹಾಡಿಗಳಿಗೆ ನೀರು, ವಿದ್ಯುತ್, ಶಾಲೆ, ರಸ್ತೆ, ಕುಡಿಯುವ ನೀರು ಮೊದಲಾದ ಸೌಕರ್ಯಗಳಿಲ್ಲದೆ ಗಿರಿಜನರು ತೊಂದರೆಗೆ ಸಿಲುಕಿರುವುದು ಗಮನಕ್ಕೆ ಬಂದಿದೆಯೇ ;

(ಇ) ಈ ಹಾಡಿ/ಪೋಡಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕೈಗೊಂಡಿರುವ ಕ್ರಮಗಳೇನು ; ಕಳೆದ ವರ್ಷ ಇದಕ್ಕಾಗಿ ಮಾಡಿರುವ ಕಾರ್ಯಕ್ರಮಗಳೇನು ; ಯಾವ ಯಾವ ಕಾರ್ಯಕ್ರಮಗಳು ಅನುಷ್ಠಾನವಾಗಿವೆ ; ಇದಕ್ಕಾಗಿ ಕಳೆದ ಸಾಲಿನಲ್ಲಿ ಮಾಡಿರುವ ವೆಚ್ಚ ಎಷ್ಟು ;

(ಈ) ಈ ಪೋಡಿ/ಹಾಡಿಗಳ ಮೇಲ್ವಿಚಾರಣೆಯನ್ನು ಮಾಡಿ ಇವುಗಳಿಗೆ ಬೇಕಾದ ಸೌಲಭ್ಯ ಒದಗಿಸಲು ಕ್ರಮ ತೆಗೆದುಕೊಳ್ಳುವುದು ಗಿರಿಜನ ಕಲ್ಯಾಣ ಇಲಾಖೆಯ ಕಾರ್ಯಕ್ರಮದಲ್ಲಿದೆಯೇ ?

## ಜಿಲ್ಲಾ ಆಸ್ಪತ್ರೆ ಕಟ್ಟಡ

**ಶ್ರೀ ಸೈಯದ್ ಮುದೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೫೧ (೮೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲಾ ಆಸ್ಪತ್ರೆ ಕಟ್ಟಡ ನಿರ್ಮಿಸುವುದಕ್ಕೆ ಸಂಬಂಧಿಸಿದಂತೆ ಅಗತ್ಯವಿರುವ ನಿವೇಶನವು ಲೋಕೋಪಯೋಗಿ ಇಲಾಖೆಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಹಸ್ತಾಂತರಿಸಲಾಗಿದೆಯೇ ; ಹಸ್ತಾಂತರವಾಗದಿದ್ದಲ್ಲಿ, ಅದಕ್ಕೆ ಇರುವ ಕಾರಣಗಳೇನು ;

(ಆ) ರಾಮನಗರ ಜಿಲ್ಲೆಯಾಗಿ ಸುಮಾರು ೭ ವರ್ಷಗಳಾದರೂ ಇನ್ನೂ ಜಿಲ್ಲಾ ಆಸ್ಪತ್ರೆ ನಿರ್ಮಾಣವಾಗದೇ ಇರುವುದರಿಂದ ಜನ ಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರುಗಳ ಕೊರತೆ

**ಶ್ರೀ ಸೈಯದ್ ಮುದೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೫೨ (೮೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳೆಷ್ಟು (ಸಂಪೂರ್ಣ ವಿವರ ನೀಡುವುದು) ;

(ಆ) ಈ ಎಲ್ಲಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; ಹಾಗೂ ಯಾವ ದಿನಾಂಕದಿಂದ ಖಾಲಿ ಇವೆ (ಸಂಪೂರ್ಣ ವಿವರ ನೀಡುವುದು) ; ಯಾವಾಗ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಇ) ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು NRHM ಯೋಜನೆಯಡಿ ಆಯುಷ್ ವೈದ್ಯರನ್ನು ತಾತ್ಕಾಲಿಕವಾಗಿ ನೇಮಕ ಮಾಡಿ ವೈದ್ಯರ ಕೊರತೆ ನೀಗಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಆಯುಷ್ ವೈದ್ಯರುಗಳ ಜೇಷ್ಠತಾ ಪಟ್ಟಿ

**ಶ್ರೀ ಸೈಯದ್ ಮುದೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೫೩ (೮೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆಯುಷ್ ಇಲಾಖೆಯಲ್ಲಿ ವೈದ್ಯರುಗಳ ಜೇಷ್ಠತಾ ಪಟ್ಟಿ ಎಷ್ಟು ವರ್ಷಗಳಿಗೊಮ್ಮೆ ಪ್ರಕಟಿಸಲಾಗುತ್ತಿದೆ ; ನಿಯಮಾವಳಿಗಳ ಅನ್ವಯ ಎಷ್ಟು ವರ್ಷಗಳಿಗೊಮ್ಮೆ ಜ್ಯೇಷ್ಠತಾ ಪಟ್ಟಿ ಪ್ರಕಟಿಸಬೇಕು ; ಈ ಸಂಬಂಧ ವಿಳಂಬ ಮಾಡುತ್ತಿದ್ದಲ್ಲಿ, ಅದಕ್ಕೆ ವಿವರವಾದ ಕಾರಣ ನೀಡುವುದು ;

(ಆ) ಆಯುಷ್ ಇಲಾಖೆಯಲ್ಲಿ ಮುಂಬಡ್ತಿಗಾಗಿ ಹಾಲಿ ಖಾಲಿ ಇರುವ ವೈದ್ಯರು ದರ್ಜೆ-೧ (ಆಯುರ್ವೇದ)/ಹಿರಿಯ ವೈದ್ಯಾಧಿಕಾರಿಗಳ ಹುದ್ದೆಗಳೆಷ್ಟು (ವಿವರ ನೀಡುವುದು) ; ಈವರೆವಿಗೂ ಸದರಿ ಹುದ್ದೆಗಳನ್ನು ಭರ್ತಿ ಮಾಡದೇ ಇರಲು ಕಾರಣವೇನು ;

(ಇ) ಸದರಿ ಖಾಲಿ ಇರುವ ವೈದ್ಯರು ದರ್ಜೆ-೧ (ಆಯುರ್ವೇದ)/ ಹಿರಿಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಲು ಆಡಳಿತ ಇಲಾಖೆಯು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಈ ಪ್ರಕ್ರಿಯೆಯನ್ನು ಎಷ್ಟು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೫೪ (೮೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕಾ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಒಟ್ಟು ರಾಜ್ಯದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು ;

(ಇ) ಇಂತಹ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಈ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ತಾಯಿ ಮತ್ತು ಶಿಶುಗಳ ಮರಣ ಪ್ರಮಾಣ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೫೫ (೮೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹೆರಿಗೆ ಸಮಯದಲ್ಲಿ ತಾಯಿ ಮತ್ತು ಶಿಶು ಮರಣ ಪ್ರಮಾಣ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದನ್ನು ಸರಿಪಡಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರ ಹೆಣ್ಣು ಮಕ್ಕಳಿಗೆ ವಿಶೇಷವಾಗಿ ತೊಂದರೆ ಆಗದಂತೆ ಮುಂಜಾಗ್ರತಾ ಕ್ರಮಗಳನ್ನು ಒದಗಿಸಲು ಈ ಸಂಬಂಧ ಮಾಹಿತಿ ನೀಡಲು ಏನು ಕಾರ್ಯಕ್ರಮಗಳನ್ನು ಕೈಗೊಂಡಿದೆ ;

(ಈ) ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಇಂತಹ ತೊಂದರೆಯಿಂದ ಮರಣ ಹೊಂದಿದ ತಾಯಿ ಮತ್ತು ಮಕ್ಕಳ ಪ್ರಮಾಣವೆಷ್ಟು ?

## ಬಿ.ಪಿ.ಎಲ್. ಕಾರ್ಡುಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೫೬ (೮೩೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ಜನ ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುವವರು, ಆಟೋ, ಟ್ಯಾಕ್ಸಿ, ಟೆಂಪೋ ಚಾಲಕರು ಆದಾಯ ಮಿತಿಯಲ್ಲಿ ಬರುವುದಿಲ್ಲವೆಂದು ಬಿ.ಪಿ.ಎಲ್. ಕಾರ್ಡು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಎಲ್ಲಾ ವರ್ಗದವರೂ ಬಡತನದ ಕೆಳಗೆ ಇರುವುದರಿಂದ ಆದಾಯ ಮಿತಿ ನಿಯಮವನ್ನು ಸಡಿಲಿಸಿ ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಬಿ.ಪಿ.ಎಲ್. ಕಾರ್ಡ್‌ದಾರರಿಗೆ ಆಹಾರ ವಿತರಣೆ ಮಾಡದೇ ಹೆಚ್ಚಿನ ಬೆಲೆಗೆ ಅಕ್ರಮವಾಗಿ ಬೇರೆಡೆಗೆ ಮಾರಾಟ ಮಾಡುತ್ತಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ಜಿಲ್ಲಾವಾರು, ತಾಲ್ಲೂಕುವಾರು ಗ್ರಾಮಗಳವಾರು ಅಂಗಡಿ ಮಾಲೀಕರ ಹೆಸರಿನೊಂದಿಗೆ ಮಾಹಿತಿ ನೀಡುವುದು) ?

## ಕೊಳವೆ ಬಾವಿಗಳ ಮಂಜೂರಾತಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೫೭ (೮೪೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ ಜಿಲ್ಲೆಯ ೬ ವಿಧಾನ ಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ನಿಗಮಗಳ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಮಂಜೂರಾದ ಕೊಳವೆ ಬಾವಿಗಳು ಎಷ್ಟು (ವರ್ಷವಾರು ಫಲಾನುಭವಿಗಳ ಸಂಪೂರ್ಣ ವಿಧಾನಸಭೆ ಕ್ಷೇತ್ರವಾರು ಮಾಹಿತಿ ನೀಡುವುದು) ;

(ಆ) ಈ ಯೋಜನೆಯಲ್ಲಿ ಮಂಜೂರಾದ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಸಲಾಗಿದೆಯೇ (ವರ್ಷವಾರು, ಕ್ಷೇತ್ರವಾರು ಫಲಾನುಭವಿಗಳ ಪಟ್ಟಿಯೊಂದಿಗೆ ಮತ್ತು ಕೊರೆಸಲು ನೀಡಲಾದ ಗುತ್ತಿಗೆದಾರರ ಹೆಸರು ಹಾಗೂ ಪ್ರತಿ ಕೊಳವೆ ಬಾವಿಗೆ ತಗುಲಿದ ಮೊತ್ತ ಎಷ್ಟು (ವಿವರ ನೀಡುವುದು) ;

(ಇ) ಮಂಜೂರಾದ ಕೊಳವೆ ಬಾವಿಗಳನ್ನು ಕೊರೆಸಲಾಗದೆ ವಿಳಂಬ ವಾಗಲು ಕಾರಣವೇನು (ವಿವರವಾದ ಸಂಪೂರ್ಣ ಮಾಹಿತಿ ಒದಗಿಸುವುದು) ?

## ಅಭಿವೃದ್ಧಿ ಕಾಮಗಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೫೮ (೮೪೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಹಿಂದುಳಿದ ಜಿಲ್ಲೆಗೆ ಕಳೆದ ೨೦೧೧ ರಿಂದ ೨೦೧೪ ಮೇ ತಿಂಗಳವರೆಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಕೇಂದ್ರ/ರಾಜ್ಯ ಸರ್ಕಾರದಿಂದ ಹಾಗೂ ಇತರ ಮೂಲಗಳಿಂದ ಎಲ್ಲಾ ಲೆಕ್ಕಶೀರ್ಷಿಕೆಯಡಿಯಲ್ಲಿ ಅಭಿವೃದ್ಧಿಗೋಸ್ಕರ ಮತ್ತು ಇತರ ಕಾರ್ಯಗಳಿಗೆ ಒಟ್ಟು ಎಷ್ಟು ಹಣ ಬಂದಿರುತ್ತದೆ ; ಅದರ ಸಂಪೂರ್ಣ ಅಂಕಿ ಅಂಶಗಳೊಂದಿಗೆ (ವರ್ಷವಾರು ಲೆಕ್ಕ ಶೀರ್ಷಿಕೆವಾರು) ಮಾಹಿತಿ ನೀಡುವುದು ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳನ್ನು ಅಭಿವೃದ್ಧಿಪಡಿಸಲಾಗಿದೆ (ಯೋಜನೆವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಇ) ಅಭಿವೃದ್ಧಿಪಡಿಸಿದಲ್ಲಿ ಆ ಯೋಜನೆಗಳ ಪಟ್ಟಿಯೊಂದಿಗೆ ಪ್ರತ್ಯೇಕ ಯೋಜನೆಗಳಿಗೆ ತಗುಲಿದ ವೆಚ್ಚ ಎಷ್ಟು (ಮಾಹಿತಿ ನೀಡುವುದು) ?

F.3

## ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸ್ಥಾಪನೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೫೯ (೮೨೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಇನ್ನೂ ಎಷ್ಟು ಕಾಲೇಜುಗಳ ಅಗತ್ಯವಿದೆ ;

(ಇ) ರಾಜ್ಯದ ಖಾಸಗಿ ಕಾಲೇಜುಗಳು ಪ್ರವೇಶಕ್ಕಾಗಿ ವಿದ್ಯಾರ್ಥಿಗಳಿಂದ ಹೆಚ್ಚಿನ ಮೊತ್ತದ ಹಣವನ್ನು ವಸೂಲು ಮಾಡುತ್ತಿದ್ದು, ಇದನ್ನು ತಪ್ಪಿಸಲು ರಾಜ್ಯ ಸರ್ಕಾರ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸುವುದೇ ?

## ನೋಂದಣಿಯಾಗಿರುವ ವಾಹನಗಳು

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೬೦ (೮೮೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ರ ವರೆಗೆ ಬೆಂಗಳೂರಿನಲ್ಲಿ ನೋಂದಣಿಯಾಗಿರುವ ವಾಹನಗಳ ಸಂಖ್ಯೆ ಎಷ್ಟು ;

(ಆ) ಇದರಿಂದ ಸಂಗ್ರಹವಾದ ಲೈಫ್ ಟ್ಯಾಕ್ಸ್ ಎಷ್ಟು ; ಸಂಗ್ರಹವಾದ ಹಣದಲ್ಲಿ ರಸ್ತೆ ದುರಸ್ತಿ ಮತ್ತು ಸುರಕ್ಷತೆಗಾಗಿ ಬಿ.ಬಿ.ಎಂ.ಪಿ.ಗೆ ನೀಡುವ ಪಾಲೆಷ್ಟು ;

(ಇ) ೨೦೧೪-೧೫ರಲ್ಲಿ ಈವರೆಗೆ ಬೆಂಗಳೂರಿನಲ್ಲಿ ನೀಡಿರುವ ಆಟೋ ಪರ್ಮಿಟ್‌ಗಳೆಷ್ಟು ?

## ಅನ್ಯ ಇಲಾಖೆಯಿಂದ ನಿಯೋಜನೆಗೊಂಡಿರುವ ಅಧಿಕಾರಿಗಳು

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು)** :-

೬೬೧ (೮೨೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಅನ್ಯ ಇಲಾಖೆಯಿಂದ ನಿಯೋಜನೆಗೊಂಡಿರುವ ಅಧಿಕಾರಿಗಳ ವಿವರ ನೀಡುವುದು ; ಆ ಅಧಿಕಾರಿಗಳು ಯಾವ ಯಾವ ಇಲಾಖೆಗೆ ಸೇರಿದವರಾಗಿದ್ದಾರೆ ;

(ಆ) ಈ ಅಧಿಕಾರಿಗಳು ಸಮಾಜ ಕಲ್ಯಾಣ ಇಲಾಖೆಗೆ ಕಾರ್ಯ ನಿರ್ವಹಿಸಲು ಬರುತ್ತಿದ್ದಾರೆಯೇ ; ಕಾಲೇಜು ಉಪನ್ಯಾಸಕರುಗಳನ್ನು ಯಾವುದೇ ಇಲಾಖೆಗೆ ನಿಯೋಜನೆ/ವಿಲೀನಗೊಳಿಸಬಾರದೆಂದು ಸರ್ಕಾರದ ಆದೇಶಗಳು ಮತ್ತು ನ್ಯಾಯಾಲಯದ ತೀರ್ಪುಗಳಿದ್ದರೂ ನಿಯೋಜನೆ ಮೇಲೆ ಕಾರ್ಯನಿರ್ವಹಿಸಲು ಅವಕಾಶ ಕಲ್ಪಿಸುವುದು ಸರಿಯೇ ; ಯಾವ ಯಾವ ಕಾರಣಕ್ಕಾಗಿ ವಿಲೀನಗೊಳಿಸುತ್ತಿದ್ದಾರೆ ; ಇಲಾಖೆಯಲ್ಲಿ ಅನುಭವಿ ಅಧಿಕಾರಿಗಳ ಕೊರತೆಯಿದೆಯೇ ; ಬೇರೆ ಇಲಾಖೆಯ ಅಧಿಕಾರಿಗಳ

03372-4

ನಿಯೋಜನೆ/ ವಿಲೀನದಿಂದ ಮಾತ್ರ ಇಲಾಖೆಯ ಅಧಿಕಾರಿಗಳಿಗೆ ತೊಂದರೆಯಾಗುವುದಿಲ್ಲವೇ ;

(ಇ) ರಾಜ್ಯದಲ್ಲಿ ನಕಲಿ ಜಾತಿ ಪ್ರಮಾಣ ಪತ್ರ ಪಡೆದ ಬಗ್ಗೆ ಪ್ರಕರಣಗಳು ದಾಖಲಾಗಿವೆಯೇ ; ದಾಖಲಾಗಿದ್ದಲ್ಲಿ, ಜಿಲ್ಲಾವಾರು ಪ್ರತಿಯೊಬ್ಬ ನಕಲಿ ಜಾತಿ ಪ್ರಮಾಣ ಪತ್ರ ಪಡೆದ ಆರೋಪಿ ಹಾಗೂ ದೂರು ನೀಡಿದವರ ವಿವರವನ್ನು ನೀಡುವುದು ; ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಈ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನೀಡುವ ಐ.ಎ.ಎಸ್., ಕೆ.ಎ.ಎಸ್., ಬ್ಯಾಂಕಿಂಗ್ ಸೇರಿದಂತೆ ಇನ್ನಿತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರಿಶಿಷ್ಟ ಜಾತಿ/ಪಂಗಡ, ಇತರೆ ಹಿಂದುಳಿದ ಜಾತಿಗಳ ವಿದ್ಯಾರ್ಥಿಗಳ ತರಬೇತಿಗೆ ನೀಡಲು ಎಷ್ಟು ಹಣವನ್ನು ಭರಿಸಲಾಗಿದೆ;

(ಉ) ಇದರಲ್ಲಿ ಖಾಸಗಿ ತರಬೇತಿ ಕೇಂದ್ರಗಳಿಗೆ ನೀಡಿರುವ ಹಣವೆಷ್ಟು; ಖಾಸಗಿ ತರಬೇತಿ ಕೇಂದ್ರಗಳನ್ನು ತರಬೇತಿ ನೀಡಲು ಆಯ್ಕೆ ಮಾಡುವಾಗ ಬಳಸುವ ಮಾನದಂಡಗಳೇನು ; ಇದುವರೆಗೂ ಖಾಸಗಿ ತರಬೇತಿ ಕೇಂದ್ರಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಊ) ಇದುವರೆಗೂ ಖಾಸಗಿ ಮತ್ತು ಖಾಸಗಿ ತರಬೇತಿ ಕೇಂದ್ರಗಳು ನೀಡಿದ ತರಬೇತಿಯಿಂದ ಒಟ್ಟು ಎಷ್ಟು ಅಭ್ಯರ್ಥಿಗಳು ಪಾಸಾಗಿ ಸರ್ಕಾರಿ ಹುದ್ದೆಗಳಿಗೆ ಆಯ್ಕೆಯಾಗಿದ್ದಾರೆ (ವಿವರ ನೀಡುವುದು)?

## ನಿರ್ಮಾಣದ ಹಂತದಲ್ಲಿರುವ ಅಂಬೇಡ್ಕರ್ ಭವನ

**ಶ್ರೀ ಅಶ್ವತ್‌ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೬೨ (೮೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರದಲ್ಲಿ ನಿರ್ಮಾಣವಾಗುತ್ತಿರುವ ಡಾ॥ ಬಿ.ಆರ್. ಅಂಬೇಡ್ಕರ್ ಭವನ ಯಾವ ಹಂತದಲ್ಲಿದೆ ; ಕಾಮಗಾರಿ ಯಾವಾಗ ಪೂರ್ಣಗೊಳ್ಳುತ್ತದೆ ;

(ಆ) ಸರ್ಕಾರ ಭವನಕ್ಕಾಗಿ ಬಿಡುಗಡೆ ಮಾಡಿದ ಹಣವೆಷ್ಟು ; ಯಾವಾಗ ಬಿಡುಗಡೆ ಮಾಡಲಾಯಿತು ;

(ಇ) ಈ ಕಟ್ಟಡ ಭವನವನ್ನು ನಿರ್ಮಾಣ ಮಾಡುತ್ತಿರುವ ಏಜೆನ್ಸಿ ಯಾವುದು ?

## ಜಿಲ್ಲಾ ಅಂಬೇಡ್ಕರ್ ಭವನ ನಿರ್ಮಾಣ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೬೩ (೮೩೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರದ ಸುಭಾಷ್‌ನಗರದಲ್ಲಿರುವ ಜಿಲ್ಲಾ ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಆ) ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ಅವಧಿಯೆಷ್ಟು ;

(ಇ) ಸದರಿ ಕಾಮಗಾರಿಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನಾಯಿ ಹಾಗೂ ಹಾವು ಕಡಿತಕ್ಕೆ ಔಷಧಿ ಕೊರತೆ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೭೬೪ (೮೩೭) ಸಾರ್ವಜನಿಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೪ ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ನಾಯಿ ದಾಳಿಗೆ ಮತ್ತು ಹಾವು ಕಡಿತಕ್ಕೆ ಒಳಗಾದವರ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ವರ್ಷಾವಾರು ಮಾಹಿತಿ ಒದಗಿಸುವುದು ;

(ಆ) ಈ ಅವಧಿಯಲ್ಲಿ ನಾಯಿ ಹಾಗೂ ಹಾವು ಕಡಿತ ಚಿಕಿತ್ಸೆಯ ಔಷಧಿಗಾಗಿ ವಿನಿಯೋಗಿಸಲಾದ ಅನುದಾನ ಎಷ್ಟು (ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲಿ ನಾಯಿ ಕಡಿತಕ್ಕೆ ಹಾವು ಕಡಿತಕ್ಕೆ ನೀಡಲಾಗುವ ಚಿಕಿತ್ಸೆಗೆ ಔಷಧಿಯು ಕೊರತೆಯಿರುವುದು ನಿಜವೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಪರಿಹಾರ ಕ್ರಮಗಳು ಏನು (ಮಾಹಿತಿ ಒದಗಿಸುವುದು) ?

## ಹೊರಗುತ್ತಿಗೆ ಪ್ರಾಂಶುಪಾಲರು/ಸಹ ಶಿಕ್ಷಕರ ಸಕ್ರಮಾತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೭೭೫ (೮೩೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಸಹ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಸಹ ಶಿಕ್ಷಕರುಗಳನ್ನು ಸಕ್ರಮಾತಿ ಗೊಳಿಸುವಂತೆ ರಾಜ್ಯ ಉಚ್ಚ ನ್ಯಾಯಾಲಯದಿಂದ ತೀರ್ಪು ಬಂದಿದೆಯೇ ; ಯಾವಾಗ ತೀರ್ಪು ಬಂದಿದೆ ; ತೀರ್ಪಿನ ಮುಖ್ಯಾಂಶಗಳೇನು (ವಿವರ ನೀಡುವುದು) ;

(ಇ) ಸಕ್ರಮಾತಿ ಬಯಸಿ ರಾಜ್ಯ ಉಚ್ಚ ನ್ಯಾಯಾಲಯಕ್ಕೆ ಹೋಗಿರುವ ಪ್ರಾಂಶುಪಾಲರು ಹಾಗೂ ಸಹ ಶಿಕ್ಷಕರ ಸಂಖ್ಯೆ ಎಷ್ಟು ;

(ಈ) ಸದರಿ ಪ್ರಾಂಶುಪಾಲರ ಹಾಗೂ ಸಹ ಶಿಕ್ಷಕರ ಸಕ್ರಮಾತಿ ಸಂಬಂಧ ಸರ್ಕಾರ ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು (ವಿವರ ನೀಡುವುದು) ;

(ಉ) ಯಾವ ಕಾಲಮಿತಿಯಲ್ಲಿ ಸಕ್ರಮಗೊಳಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗುವುದು ?

## ವಸತಿ ಶಾಲೆಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೬೬ (೮೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಮಂಜೂರಾದ ಒಟ್ಟು ವಸತಿ ನಿಲಯಗಳು ಎಷ್ಟು ;

(ಆ) ಇವುಗಳಲ್ಲಿ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರ ರಾಣಿ ಚನ್ನಮ್ಮ ವಸತಿನಿಲಯಗಳು ಎಷ್ಟು ; ಈ ವಸತಿ ಶಾಲೆಗಳ ಪೈಕಿ ಸ್ವಂತ ಮತ್ತು ಬಾಡಿಗೆ ಕಟ್ಟಡಗಳು ಎಷ್ಟು ;

(ಇ) ಸದರಿ ಶಾಲೆಗಳು ಸ್ವಂತ ಕಟ್ಟಡ ಹೊಂದಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಈ) ಈ ಶಾಲೆಗಳಲ್ಲಿ ಒಟ್ಟು ಮಕ್ಕಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಹಾಗೂ ಹಿಂದುಳಿದ ವರ್ಗಗಳ ಮಕ್ಕಳ ಸಂಖ್ಯೆ ಎಷ್ಟು ?

## ಗುತ್ತಿಗೆ ಆಧಾರದ ನರ್ಸ್‌ಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೬೬೭ (೮೪೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇರುವ ನರ್ಸಿಂಗ್ ಹುದ್ದೆಗಳ ಕೊರತೆ ವಿವರ ಜಿಲ್ಲಾವಾರು ನೀಡುವುದು (GNM, ANM) ;

(ಆ) ರಾಜ್ಯದಲ್ಲಿ ಕೇಂದ್ರಿಯ ಮತ್ತು ರಾಜ್ಯದ ಯೋಜನೆಗಳಡಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ನರ್ಸ್‌ಗಳ ಸಂಖ್ಯೆ ಎಷ್ಟು ;

(ಇ) ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ನರ್ಸ್‌ಗಳಿಗೆ ನೀಡುತ್ತಿರುವ ಸಂಬಳದ ವಿವರ ನೀಡುವುದು ;

(ಈ) ರಾಜ್ಯದಲ್ಲಿ ನರ್ಸ್‌ಗಳ ಕೊರತೆ ಇದ್ದರೂ ಹಲವು ವರ್ಷಗಳಿಂದ ತೃಪ್ತಿಕರ ಸೇವೆ ಸಲ್ಲಿಸುತ್ತಿರುವ ನರ್ಸ್‌ಗಳನ್ನು ಸೇವೆಯಲ್ಲಿ ಸಕ್ರಮಗೊಳಿಸಲು ಸರಕಾರ ಏನು ಕ್ರಮ ಕೈಗೊಂಡಿದೆ ?

## ಪಡಿತರ ಕಾರ್ಡ್ ನಿರ್ವಹಣೆಗೆ ೫೦ ರೂ.ಗಳ ಸಂಗ್ರಹಣೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೬೮ (೮೮೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಯಲ್ಲಿ ಪಡಿತರ ಚೀಟಿಯ ನಿರ್ವಹಣೆಗಾಗಿ ಪ್ರತಿ ರೇಶನ್ ಕಾರ್ಡ್ ನಿರ್ವಹಣೆಗಾಗಿ ೫೦ ರೂಪಾಯಿ ಸಂಗ್ರಹಿಸುತ್ತಿದ್ದು ಸದರಿ ಹಣವನ್ನು ಸರ್ಕಾರಕ್ಕೆ ಪಾವತಿಸಲು ಹೇಳಿದ್ದು ನಿಜವೇ ;

(ಆ) ಗ್ರಾಮ ಪಂಚಾಯತಿಯಲ್ಲಿ ಇಂತಹ ಸಂಗ್ರಹಣೆಯ ಒಟ್ಟು ಮೊತ್ತವೆಷ್ಟು (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು);

(ಇ) ಗ್ರಾಮ ಪಂಚಾಯತ್ ದುಡಿದ ಹಣವನ್ನು ಸರ್ಕಾರ ಪಡೆಯುವ ಬದಲಾಗಿ ಪಂಚಾಯತ್‌ಗಳೇ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗ ಮಾಡಲು ಅನುಮತಿ ನೀಡುವುದು ಸರಿಯಲ್ಲವೆ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಸಹ ನಿರ್ದೇಶಕರ ಹುದ್ದೆಯ ನೇಮಕ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೬೯ (೮೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಆರೋಗ್ಯ ಸಂಸ್ಥೆಯಲ್ಲಿ ಸಹ ನಿರ್ದೇಶಕರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಹುದ್ದೆ ಎಷ್ಟು ವರ್ಷಗಳಿಂದ ಖಾಲಿ ಇದೆ ; ಖಾಲಿ ಬಿಡಲು ಕಾರಣವೇನು ;

(ಆ) ಯಾವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಮತ್ತು ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಆಹಾರ ಸುರಕ್ಷತ ಅಧಿಕಾರಿ ಹುದ್ದೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೭೦ (೮೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಆಹಾರ ಸುರಕ್ಷತಾ ಅಧಿಕಾರಿಗಳ ಹುದ್ದೆ ಎಷ್ಟು (ಹುದ್ದೆವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಆ) ಎಂ.ಎಸ್.ಸಿ., ಪದವಿ ಹೊಂದಿರುವ ಎಷ್ಟು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಿರುತ್ತಾರೆ (ವಿವರ ನೀಡುವುದು) ;

(ಇ) ಮೇಲ್ಕಂಡ ಅಭ್ಯರ್ಥಿಗಳನ್ನು ಯಾವ ಮಾನದಂಡದಡಿಯಲ್ಲಿ ಆಯ್ಕೆ ಮಾಡಲಾಗುತ್ತಿದೆ ;

(ಈ) ನೇಮಕಾತಿ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ನೀಡುವ ಸೌಲಭ್ಯಗಳ ಸರಳೀಕರಣ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೭೧ (೮೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ನೀಡುವ ಸಕಲ ಸವಲತ್ತುಗಳೇನು (ಪೂರ್ಣವಾದ ವಿವರ ನೀಡುವುದು) ;

(ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಸವಲತ್ತು ನೀಡುವ ಸಂದರ್ಭದಲ್ಲಿ ಹಾಕಿರುವ ನಿಬಂಧನೆಗಳನ್ನು ಸರಳೀಕರಿಸಬೇಕೆಂದು ಸರ್ಕಾರಕ್ಕೆ ಅನಿಸಿದೆಯೇ ;

(ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಹಾವಿನ ವಿಷ ನಿರೋಧಕ ಔಷಧಗಳು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೬೭೨ (೮೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರತಿ ವರ್ಷ ಸುಮಾರು ೩೦೦ಕ್ಕಿಂತ ಅಧಿಕ ಜನರು ಹಾವು ಕಡಿತದಿಂದ ಸಾವನ್ನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ನಾಲ್ಕೈದು ವರ್ಷಗಳಲ್ಲಿ ಹಾವಿನ ಕಡಿತದಿಂದ ಮರಣ ಹೊಂದಿದ ಜನರ ಸಂಖ್ಯೆ ಎಷ್ಟು (ವರ್ಷವಾರು) ;

(ಇ) ಹಾವಿನ ವಿಷ ನಿರೋಧಕ ಔಷಧವನ್ನು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಜಿಲ್ಲಾ ಆಸ್ಪತ್ರೆಯವರೆಗಿನ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಸರಬರಾಜು ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ಇಲ್ಲದಿದ್ದಲ್ಲಿ, ಎಲ್ಲ ಸರ್ಕಾರಿ ಆಸ್ಪತ್ರೆಗಳಿಗೆ ವಿಷ ನಿರೋಧಕ ಔಷಧವನ್ನು ಸರಬರಾಜು ಮಾಡಲು ಕೂಡಲೇ ಕ್ರಮ ಜರುಗಿಸಲಾಗುವುದೇ ?

## ವಸತಿ ಶಾಲೆಗಳ ಸಿಬ್ಬಂದಿಗಳ ಸೇವಾ ಸೌಲಭ್ಯಗಳು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೬೭೩ (೮೫೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಅಧೀನದಲ್ಲಿ ನಡೆಯುತ್ತಿರುವ ೫೨೫ ಮೊರಾರ್ಜಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ

ಕೆಲಸ ಮಾಡುತ್ತಿರುವ ಖಾಯಂ ಸಿಬ್ಬಂದಿಗಳು ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ದಿನಾಂಕ:೧೩-೦೬-೨೦೧೪ರಂದು ಇಲಾಖೆಯ ನಿರ್ದೇಶಕರು ಹೊಸ ನಿವೃತ್ತಿ ವೇತನ (ಎನ್.ಪಿ.ಎಸ್.) ಸೌಲಭ್ಯವನ್ನು ಅಳವಡಿಸಲು ಸುತ್ತೋಲೆ ಹೊರಡಿಸಿದ್ದು ನಿಜವೇ ; ಆ ಸುತ್ತೋಲೆಯ ಸಾರಾಂಶವೇನು ;

(ಇ) ಇ.ಪಿ.ಎಫ್‌ನ್ನು ನೀಡಲಾಗುವುದೆಂದು, ಇದಕ್ಕೆ ನೌಕರರ ಸಮ್ಮತಿ ಇದೆಯೇ ಎಂದು ಸುತ್ತೋಲೆ ಹೊರಡಿಸಿರುವುದು ಸರಿಯೇ ; ಎಲ್ಲ ಸರ್ಕಾರಿ ನೌಕರರಿಗೆ ಸಿಗುವ ರೀತಿಯಲ್ಲಿಯೇ ಇವರಿಗೂ ಹೊಸ ನಿವೃತ್ತಿ ವೇತನ (ಎನ್.ಪಿ.ಎಸ್.) ಸೌಲಭ್ಯವನ್ನು ಅಳವಡಿಸಲು ಇರುವ ತೊಂದರೆಗಳೇನು ; ಸರ್ಕಾರಿ ನೌಕರರಿಗೆ ಜಾರಿಗೊಳಿಸಿರುವ ಎನ್.ಪಿ.ಎಸ್ ಸೌಲಭ್ಯವನ್ನು ಸದರಿ ಸಿಬ್ಬಂದಿಗೆ ತಕ್ಷಣ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಹೆಲ್ತ್ ಕ್ಯಾಂಪಸ್ ಘಟಕದ ಕಾಮಗಾರಿ ವಿಳಂಬ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೭೪ (೮೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಭೀಮನಕುಪ್ಪೆಯಲ್ಲಿ ನಿರ್ಮಾಣಗೊಳ್ಳುತ್ತಿರುವ ಹೆಲ್ತ್ ಕ್ಯಾಂಪಸ್ ಕಾಮಗಾರಿ ನಿಗದಿಪಡಿಸಿದ ಸಮಯಕ್ಕಿಂತ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬವಾಗಿದ್ದಲ್ಲಿ, ಕಾರಣ ನೀಡುವುದು. ಕಾಮಗಾರಿಯು ಪೂರ್ಣಗೊಳ್ಳಲು ಇನ್ನೂ ಬೇಕಾಗುವ ಸಮಯವೆಷ್ಟು ;

(ಆ) ಹೆಲ್ತ್ ಕ್ಯಾಂಪಸ್ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ನಿಗದಿಪಡಿಸಿರುವ ಅವಧಿಯೆಷ್ಟು ; ಈ ಕಾಮಗಾರಿಯು ಪ್ರಾರಂಭವಾಗಿ ಎಷ್ಟು ಸಮಯವಾಗಿದೆ ; ಕಾಮಗಾರಿಯ ಜವಾಬ್ದಾರಿಯನ್ನು ಸರ್ಕಾರ ನಿರ್ವಹಿಸುತ್ತಿದೆಯೇ ಅಥವಾ ಇನ್ನಾವುದೇ ಸಂಸ್ಥೆಗೆ ವಹಿಸಲಾಗಿದೆಯೇ ; ಹಾಗಿದ್ದಲ್ಲಿ, ಸಂಸ್ಥೆಯ ವಿವರ ನೀಡುವುದು ;

(ಇ) ಸದರಿ ಕಾಮಗಾರಿಗೆ ಇರಿಸಲಾಗಿದ್ದ ಅನುದಾನವೆಷ್ಟು (ಮೀಸಲಿಟ್ಟ ಒಟ್ಟು ಅನುದಾನದ ಬಳಕೆಯ ವಿವರ ನೀಡುವುದು) ?

## ಎರವಲು ಸೇವೆಯ ಅಧಿಕಾರಿಗಳ ವಿಲೀನ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೭೫ (೮೫೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದೇಶಗಳು ಮತ್ತು ನ್ಯಾಯಾಲಯದ ತೀರ್ಪುಗಳಿದ್ದರೂ ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಾಲೇಜು ಉಪನ್ಯಾಸಕರುಗಳನ್ನು ಎರವಲು ಪಡೆದಿರುವುದು ಹಾಗೂ ವಿಲೀನ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ ಯಾವುದೇ ಇಲಾಖೆಗೆ ನಿಯೋಜನೆ/ವಿಲೀನಗೊಳಿಸಬಾರದೆಂದು ಆದೇಶವಿದ್ದರೂ ನಿಯೋಜಿಸುವುದರ ಹಿಂದಿನ ಉದ್ದೇಶವೇನು ;

(ಆ) ಉಪನ್ಯಾಸಕರನ್ನು ನಿಯೋಜಿಸುವುದು/ವಿಲೀನಗೊಳಿಸುವುದರಿಂದ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಲು ತೊಂದರೆಯಾಗುವುದಿಲ್ಲವೆ ; ಪಿ.ಯು.ಸಿ. ಉಪನ್ಯಾಸಕರನ್ನು ವಿಲೀನಗೊಳಿಸಲು ಕಾರಣವೇನು ;

(ಇ) ಇಲಾಖೆಯಲ್ಲಿ ಅನುಭವಸ್ಥ ಅಧಿಕಾರಿಗಳ ಕೊರತೆಯಿದೆಯೇ ; (ವಿವರ ನೀಡುವುದು) ಅಧಿಕಾರಿಗಳು ಯಾವ-ಯಾವ ಇಲಾಖೆಗೆ ಸೇರಿದವರಾಗಿದ್ದಾರೆ ; ಈ ಅಧಿಕಾರಿಗಳು ಸಮಾಜ ಕಲ್ಯಾಣ ಇಲಾಖೆಗೆ ಬರಲು ಕಾರಣವೇನು ;

(ಈ) ಬೇರೆ-ಬೇರೆ ಇಲಾಖೆಯ ಅಧಿಕಾರಿಗಳ ನಿಯೋಜನೆ/ವಿಲೀನದಿಂದ ಸ್ವಂತ ಇಲಾಖೆಯ ಅಧಿಕಾರಿಗಳಿಗೆ ತೊಂದರೆಯಾಗುವುದಿಲ್ಲವೆ ; ಇವರುಗಳು ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಣಾಮ ಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆಯೇ ; ಹಣ ದುರುಪಯೋಗ ಮಾಡಿರುವ, ಕರ್ತವ್ಯ ಲೋಪವೆಸಗಿರುವ ಅಧಿಕಾರಿಗಳ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಣ ದುರುಪಯೋಗ ಮಾಡಿರುವ ಅಧಿಕಾರಿಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ವಿಲೀನಗೊಳಿಸಲಾಗಿದೆಯೇ ; ಅಂತಹ ಅಧಿಕಾರಿಗಳು ಯಾರು (ವಿವರಣೆ ನೀಡುವುದು) ?

## ಯುವ ವಿಜ್ಞಾನಿಗಳಿಗೆ ಉತ್ತೇಜನ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೭೬ (೮೫೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯುವ ವಿಜ್ಞಾನಿಗಳನ್ನು ಹುಟ್ಟುಹಾಕುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸರ್ಕಾರದ ನಿಲುವು ಮತ್ತು ಯೋಜನೆಗಳೇನು ; ಯುವ ವಿಜ್ಞಾನಿಗಳಿಗೆ ಸರ್ಕಾರ ಯಾವ್ಯಾವ ಉತ್ತೇಜನ ನೀಡುತ್ತಿದೆ ;

(ಆ) ರಾಜ್ಯದ ಎಷ್ಟು ವಿದ್ಯಾರ್ಥಿಗಳು ವೈಜ್ಞಾನಿಕ ತರಬೇತಿ ಪಡೆಯುತ್ತಿದ್ದಾರೆ ; ಅವರಿಗೆ ನೀಡಲಾಗುತ್ತಿರುವ ಸರ್ಕಾರದ ಮಾರ್ಗದರ್ಶನದ ಬಗ್ಗೆ ವಿವರ ನೀಡುವುದು ; ರಾಜ್ಯದಲ್ಲಿ ಎಷ್ಟು ವೈಜ್ಞಾನಿಕ ತರಬೇತಿ ಸಂಸ್ಥೆಗಳಿವೆ ; ಎಷ್ಟು ವಿದ್ಯಾರ್ಥಿಗಳು ತರಬೇತಿ ಪಡೆಯುತ್ತಿದ್ದಾರೆ (ಜಿಲ್ಲಾವಾರು ವಿವರ ನೀಡುವುದು) ;

(ಇ) ಯುವ ವಿಜ್ಞಾನಿಗಳಿಗೆ ಸರ್ಕಾರವು ಯಾವ ರೀತಿಯ ಸಹಕಾರ ನೀಡುತ್ತಿದೆ ; ಇವರ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿವೇತನ, ಭತ್ಯೆ ಇನ್ನಿತರೆ ಸವಲತ್ತುಗಳನ್ನು ನೀಡಲಾಗುತ್ತಿದೆಯೇ ; ಇದಕ್ಕೆ ಅನುದಾನ ಮೀಸಲಿರಿಸಲಾಗಿದೆಯೇ (ವಿವರ ನೀಡುವುದು) ;

(ಈ) ಗ್ರಾಮೀಣ ಪ್ರದೇಶದಲ್ಲಿ ವಿದ್ಯಾರ್ಥಿಗಳನ್ನು ಹಾಗೂ ಬಡ ಕುಟುಂಬದ ವಿದ್ಯಾರ್ಥಿಗಳನ್ನು ವೈಜ್ಞಾನಿಕತೆಯ ಕಡೆಗೆ ಪ್ರೋತ್ಸಾಹಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆಯೇ ; ವೈಜ್ಞಾನಿಕ ಅರಿವು ಮೂಡಿಸಲಾಗುತ್ತಿದೆಯೇ (ಮಾಹಿತಿ ನೀಡುವುದು) ?

## ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೭೭ (೮೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಆಸ್ಪತ್ರೆಗಳಲ್ಲಿ ವಿವಿಧ ಶಸ್ತ್ರ ಚಿಕಿತ್ಸೆಗೆ ತಕ್ಕಂತೆ ವಿವಿಧ ವಿಭಾಗದ ವೈದ್ಯರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಆಸ್ಪತ್ರೆಗಳಲ್ಲಿ ವಿವಿಧ ರಕ್ತ ಪರೀಕ್ಷೆ ಕೇಂದ್ರಗಳು ಮತ್ತು ಎಕ್ಸ್‌ರೇ ಮಿಷನ್‌ಗಳು, ಸ್ಕ್ಯಾನಿಂಗ್ ಮಿಷನ್‌ಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಹಿಳೆ ಹಾಸ್ಟಲ್‌ಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೭೮ (೮೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹೆಣ್ಣು ಮಕ್ಕಳ ವಸತಿ ನಿಲಯಗಳು ಎಷ್ಟು ;

(ಆ) ಈ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಸತಿ ನಿಲಯಗಳಲ್ಲಿ ಹೆಣ್ಣು ಮಕ್ಕಳ ಸೂಕ್ತ ರಕ್ಷಣೆಗಾಗಿ ಸರ್ಕಾರ ಏನು ಕ್ರಮಗಳನ್ನು ಕೈಗೊಂಡಿದೆ ?

# ೩೭೧ಜೆ ಪ್ರಕಾರ ಹೈದರಾಬಾದ್ ಕರ್ನಾಟಕ ಮೆಡಿಕಲ್/ ಇಂಜಿನಿಯರಿಂಗ್ ಸೀಟುಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೭೯ (೮೫೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೩೭೧ಜೆ ಪ್ರಕಾರ ಹೈದರಾಬಾದ್ ಕರ್ನಾಟಕ ಪ್ರದೇಶದ ಮೆಡಿಕಲ್/ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹೈದರಾಬಾದ್ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಎಷ್ಟು ಮೆಡಿಕಲ್ ಸೀಟುಗಳು ಮತ್ತು ಎಷ್ಟು ಇಂಜಿನಿಯರಿಂಗ್ ಸೀಟುಗಳು ಲಭ್ಯ ಇವೆ ; ಯಾವ ಯಾವ ಕಾಲೇಜುಗಳಲ್ಲಿ ಲಭ್ಯ ಇವೆ (ವಿವರ ನೀಡುವುದು) ;

(ಆ) ಪ್ರಸಕ್ತ ವರ್ಷದಿಂದ ಈ ಮೀಸಲಾತಿ ಸೌಲಭ್ಯ ವಿಸ್ತರಿಸಲಿದ್ದು ಹೈದರಾಬಾದ್ ಕರ್ನಾಟಕ ಪ್ರದೇಶ ಹೊರತುಪಡಿಸಿ ಇರುವ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳಿಗೆ ಎಷ್ಟು ಸೀಟುಗಳು ಲಭ್ಯ ಇವೆ ;

(ಇ) ಗುಲ್ಬರ್ಗಾದಲ್ಲಿ ಸ್ಥಾಪನೆಯಾದ ಇ.ಎಸ್.ಐ. ಮೆಡಿಕಲ್ ಕಾಲೇಜಿನಲ್ಲಿ ೩೭೧ಜೆ ಅನುಸಾರ ಈ ಭಾಗದ ವಿದ್ಯಾರ್ಥಿಗಳಿಗೆ ಮೀಸಲಾತಿ ಇದೆಯೇ ; ಎಷ್ಟು ಸೀಟುಗಳು ಲಭ್ಯ ಇವೆ ?

## ತೆರಿಗೆ ವಿನಾಯತಿ ಪಡೆದ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೦ (೮೬೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ತೆರಿಗೆ ವಿನಾಯತಿ ಪಡೆದ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳೆಷ್ಟು ; ಅವು ಯಾವುವು ;

(ಆ) ಈ ಸಂಸ್ಥೆಗಳಿಂದ ರಾಜ್ಯದ ಪ್ರಗತಿಗೆ (ಆರ್ಥಿಕ ಬೆಳವಣಿಗೆಗೆ) ಆಗಿರುವ ಪ್ರಯೋಜನಗಳೇನು ?

## ಮಾಹಿತಿ ಮತ್ತು ತಂತ್ರಜ್ಞಾನ ಸಂಸ್ಥೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೧ (೮೬೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳೆಷ್ಟು ;

(ಆ) ಈ ಸಂಸ್ಥೆಗಳು ಹೊಂದಿರುವ ಬಂಡವಾಳವೆಷ್ಟು ;

(ಇ) ಈ ಸಂಸ್ಥೆಗಳು ಸರ್ಕಾರದಿಂದ ಪಡೆದಿರುವ ಸೌಲಭ್ಯಗಳು ಯಾವುವು ;

(ಈ) ಈ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ಅದರಲ್ಲಿ ಕನ್ನಡಿಗರ ಸಂಖ್ಯೆ ಎಷ್ಟು ?

## ಅನ್ನಭಾಗ್ಯ ಯೋಜನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೬೮೨ (೮೬೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನ್ನ ಭಾಗ್ಯ ಯೋಜನೆಯ ಉದ್ದೇಶವೇನು ;

(ಆ) ಈ ಯೋಜನೆ ಅಡಿಯಲ್ಲಿ ಬರುವ ಫಲಾನುಭವಿಗಳು ಎಷ್ಟು ;

(ಇ) ಈ ಫಲಾನುಭವಿಗಳಿಗೆ ಸರ್ಕಾರ ನೀಡುತ್ತಿರುವ ಪಡಿತರ ಎಷ್ಟು ; ಮತ್ತು ಯಾವುವು (ವಿವರಗಳೊಂದಿಗೆ) ;

(ಈ) ಈ ಅನ್ನಭಾಗ್ಯ ಯೋಜನೆಗೆ ಕೇಂದ್ರ ಸರ್ಕಾರದ ಪಾಲು ಎಷ್ಟು ; ರಾಜ್ಯ ಸರ್ಕಾರದ ಪಾಲು ಎಷ್ಟು ;

(ಉ) ಕೇಂದ್ರದ ಆಹಾರ ಭದ್ರತೆ ಯೋಜನೆಗೂ ರಾಜ್ಯದ ಅನ್ನಭಾಗ್ಯ ಯೋಜನೆಗೂ ಇರುವ ಸಂಬಂಧವೇನು ?

## ವೈದ್ಯಕೀಯ ಕಾಲೇಜು ಸ್ಥಾಪನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೬೮೩ (೮೬.೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ವೈದ್ಯಕೀಯ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರ ಅಭಿವೃದ್ಧಿ

**ಶ್ರೀ ಆರ್. ಧರ್ಮಸೇನಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೭೮೪ (೮೬೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರಿಗೆ ಸರ್ಕಾರವು ಹಮ್ಮಿಕೊಂಡಿರುವ ವಿವಿಧ ಯೋಜನೆಗಳಾವುವು ;

(ಆ) ಮೈಸೂರು ಜಿಲ್ಲೆಗೆ ಈ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯು ನಿಗದಿ ಪಡಿಸಿದ ಗುರಿಯೆಷ್ಟು ;

(ಇ) ಕಳೆದ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿ ತಾಲ್ಲೂಕುವಾರು, ಯೋಜನಾವಾರು ಸಾಧಿಸಿದ ಪ್ರಗತಿ ಎಷ್ಟು (ಸಂಪೂರ್ಣ ವಿವರಗಳನ್ನು ನೀಡುವುದು) ?

## ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳು

**ಶ್ರೀ ಆರ್. ಧರ್ಮಸೇನಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೭೮೫ (೮೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಒಟ್ಟು ಎಷ್ಟು ಹಾಸ್ಟೆಲ್‌ಗಳಿವೆ ;

(ಆ) ಪ್ರತಿ ಹಾಸ್ಟೆಲ್‌ನಲ್ಲಿ ಒಟ್ಟು ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು (ಜಾತಿವಾರು ವಿವರ ನೀಡುವುದು) ;

(ಇ) ಎಷ್ಟು ಹಾಸ್ಟೆಲ್‌ಗಳು ಸರ್ಕಾರದ ಕಟ್ಟಡದಲ್ಲಿವೆ ; ಎಷ್ಟು ಹಾಸ್ಟೆಲ್‌ಗಳು ಬಾಡಿಗೆಯ ಕಟ್ಟಡದಲ್ಲಿವೆ (ವಿವರಗಳನ್ನು ನೀಡುವುದು) ;

(ಈ) ಹಾಗಿದ್ದಲ್ಲಿ, ಸರ್ಕಾರವು ಈ ಬಾಡಿಗೆ ಕಟ್ಟಡಗಳಿಗೆ ಪಾವತಿಸುವ ಬಾಡಿಗೆ ಎಷ್ಟು (ವಿವರ ನೀಡುವುದು) ;

(ಉ) ೨೦೧೩–೧೪ನೇ ಸಾಲಿನಲ್ಲಿ ಮೈಸೂರು ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಈ ಬಿಡುಗಡೆಯಾದ ಹಣದಲ್ಲಿ ಬಳಕೆಯಾಗಿರುವ ಹಣವೆಷ್ಟು ?

## ಪಡಿತರ ಚೀಟಿಗಳ ವಿತರಣೆ

**ಶ್ರೀ ಆರ್. ಧರ್ಮಸೇನಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೮೬ (೮೬೫) ಮಾನ್ಯ ಆಹಾರ ಮತ್ತು ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪಡಿತರ ಚೀಟಿ (ಎಪಿಎಲ್/ಬಿಪಿಎಲ್) ಯನ್ನು ಪಡೆಯಲು ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು (ಎಪಿಎಲ್/ಬಿಪಿಎಲ್ ಪ್ರತ್ಯೇಕ ವಿವರ ನೀಡುವುದು) ;

(ಆ) ಎಷ್ಟು ಅರ್ಜಿಗಳನ್ನು ಪರಿಗಣಿಸಿ, ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗಿದೆ (ಎಪಿಎಲ್/ಬಿಪಿಎಲ್ ಚೀಟಿಯ ವಿವರ ನೀಡುವುದು) ;

(ಇ) ಇನ್ನೂ ವಿತರಿಸಬೇಕಾದ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಯಾವ ಕಾರಣಗಳಿಗೆ ಇನ್ನೂ ಬಾಕಿ ಉಳಿದಿದೆ ; ಯಾವಾಗ ವಿತರಿಸಲಾಗುವುದು ; ತ್ವರಿತಗತಿಯಲ್ಲಿ ವಿತರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಇಲಾಖೆಗೆ ಬಂದಂತಹ ಪ್ರಸ್ತಾಪಗಳ ವಿಲೇವಾರಿ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೬೮೭ (೮೭೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಇಲಾಖೆಗೆ ಕಳೆದ ೨ ವರ್ಷದಿಂದ ಬಂದಂತಹ ಸಮುದಾಯಭವನ ಹಾಗೂ ವಿದ್ಯಾರ್ಥಿ ನಿಲಯಗಳು ಪೂರ್ಣಮಟ್ಟದ ಪ್ರಸ್ತಾವನೆಗಳು ಎಷ್ಟು ;

(ಆ) ವಿವಿಧ ಸಮುದಾಯಗಳು ಅಭಿವೃದ್ಧಿ ಯೋಜನೆಗೆ ಬಂದಂತಹ ಪ್ರಸ್ತಾಪಗಳಿಗೆ ವಿವಿಧ ಅಧಿಕಾರಿಗಳಿಗೆ ನೀಡಿರುವ ಜವಾಬ್ದಾರಿ ಏನು ;

(ಇ) ಹಾಗಿದ್ದಲ್ಲಿ, ಜಿಲ್ಲಾ ಮಟ್ಟದಿಂದ ಬಂದಂತಹ ನೂರಾರು ಪ್ರಸ್ತಾವನೆಗಳು ಇದುವರೆವಿಗೂ ಹಣ ಬಿಡುಗಡೆಯಾಗದೆ ಹತ್ತಾರುಬಾರಿ ಆಯುಕ್ತರ ಕಛೇರಿಗೆ ಅಲೆದಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೆ ;

(ಈ) ಆಯುಕ್ತರ ಕಛೇರಿಗೆ ಬಂದಂತಹ ಪ್ರಸ್ತಾವನೆಗಳು ಎಷ್ಟು ದಿನಗಳಲ್ಲಿ ಹಣ ಬಿಡುಗಡೆಯಾಗಿ ಆಯಾ ಜಿಲ್ಲೆಗೆ ತಲುಪಲು ಇರುವ ಮಾನದಂಡವೇನು ;

(ಉ) ಬಂದಿರುವ ಎಲ್ಲಾ ಕಡತಗಳನ್ನು ಈ ವರ್ಷದಲ್ಲೆ ವಿಲೇ ಮಾಡಲಾಗುವುದೆ ?

## ಬೆಳಗಾವಿ ನಗರದಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಾಣ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೬೮೮ (೮೭೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರ ಸುವರ್ಣಸೌಧ ಪಡೆದಿದ್ದು ಇತಿಹಾಸ ದಾಖಲೆಯಾಗಿದ್ದು ಸಮರ್ಪಕ ಬಸ್ ನಿಲ್ದಾಣ ಇಲ್ಲದೆ ಪ್ರಯಾಣಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ;

(ಆ) ಹಾಗಿದ್ದಲ್ಲಿ, ಇದುವರೆವಿಗೂ ನೂತನ ಬಸ್ ನಿಲ್ದಾಣ ಮಾಡದಿರಲು ಕಾರಣವೇನು ;

(ಇ) ಬಸ್ ನಿಲ್ದಾಣ ಮಾಡಲು ಜಾಗದ ಕೊರತೆಯಿದೆಯೇ ; ಅಥವಾ ಹಣದ ಕೊರತೆಯಿದೆಯೇ ;

(ಈ) ಹಾಗಿದ್ದಲ್ಲಿ, ಕೂಡಲೇ ಹೊಸ ಬಸ್ ನಿಲ್ದಾಣ ಮಾಡಲು ಸರ್ಕಾರ ಯೋಚಿಸುವುದೆ ?

## ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ನಿರ್ವಹಣೆ ಹಾಗೂ ಸೇವೆಯ ಕೊರತೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೬೮೯ (೮೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಬೌರಿಂಗ್ ಆಸ್ಪತ್ರೆ ಯಾವಾಗಿನಿಂದ ಸೇವೆಯನ್ನು ಆರಂಭಿಸಿರುತ್ತದೆ ;

(ಆ) ಈ ಆಸ್ಪತ್ರೆಯಲ್ಲಿಯ ಸೇವೆಗಳ ಮಾನದಂಡವೇನು (ವ್ಯವಸ್ಥೆಗಳ ಬಗ್ಗೆ ಪೂರ್ಣ ಮಾಹಿತಿ ನೀಡುವುದು) ;

(ಇ) ಇತ್ತೀಚಿನ ದಿನಗಳಲ್ಲಿ ಬಡ ರೋಗಿಗಳಿಗೆ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಬರಲು ಅವಕಾಶಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೊರ ರೋಗಿಗಳಿಗೆ ಯಾವ ರೀತಿ ಚಿಕಿತ್ಸಾ ಸೌಲಭ್ಯ ದೊರಕುತ್ತಿದೆ ;

(ಉ) ಮುಂದಿನ ದಿನಗಳಲ್ಲಿ ಆಸ್ಪತ್ರೆಯ ಎಲ್ಲಾ ಸೌಲಭ್ಯಗಳನ್ನು ಹೆಚ್ಚು ಮಾಡಲು, ಹೊಸ ಕಟ್ಟಡ ಕಟ್ಟಲು ಸರ್ಕಾರ ಯೋಚಿಸಿದೆಯೇ ?

## ಜಿಲ್ಲಾ ಆಸ್ಪತ್ರೆಯ ಮೇಲ್ದರ್ಜೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೬೯೦ (೮೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಬಹಳ ದೊಡ್ಡ ಜಿಲ್ಲೆಯಾಗಿ ಹೊರಹೊಮ್ಮಿದ್ದು ಜಿಲ್ಲಾ ಕೇಂದ್ರ ಸ್ಥಾನದಲ್ಲಿರುವ ಜಿಲ್ಲಾ ಆಸ್ಪತ್ರೆಯ ಸ್ಥಿತಿಗತಿ ಬಗ್ಗೆ ಸರ್ಕಾರ ಗಮನಿಸಿದೆಯೇ ;

(ಆ) ಹೆಚ್ಚಿನ ವಿಸ್ತೀರ್ಣ ಹೊಂದಿರುವ ಈ ಜಿಲ್ಲಾಸ್ಪತ್ರೆಗೆ ಇನ್ನೂ ಹೆಚ್ಚಿನ ನೂತನ ಕಟ್ಟಡಗಳು ಹಾಗೂ ಉತ್ತಮ ಸೇವೆ ನೀಡಲು ಇರುವ ತೊಂದರೆಗಳೇನು ;

(ಇ) ಅನೇಕ ಬಾರಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಈಗಾಗಲೇ ಪ್ರಸ್ತಾಪ ಸಲ್ಲಿಸಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಈಗಲಾದರೂ ಸುಸಜ್ಜಿತವಾದ ವ್ಯವಸ್ಥೆ ಮೂಲಕ ಆಸ್ಪತ್ರೆ ನಿರ್ವಹಣೆ ಮಾಡಲು ಆದೇಶ ಮಾಡಲಾಗುವುದೆ ?

## ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಹೆಚ್ಚಿನ ಅನುದಾನ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೬೯೧ (೮೭೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಾಂಗದವರಿಗೆ ಸಮಾಜ ಕಲ್ಯಾಣ ಇಲಾಖೆ ನೀಡಿರುವ ಯೋಜನೆಗಳಾವುವು (ಪೂರ್ಣ ಮಾಹಿತಿ ನೀಡುವುದು) ;

(ಆ) ಸ್ವಾತಂತ್ರ್ಯ ಬಂದು ೬೫ ವರ್ಷವಾದರೂ ಇನ್ನು ಅನೇಕ ಹಳ್ಳಿಯ ಕಾಲೋನಿಗಳಿಗೆ ಸಿಮೆಂಟ್ ರಸ್ತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಜನಾಂಗದವರಿಗೆ ಆಯವ್ಯಯದಲ್ಲಿ ನೀಡಿರುವ ಅನುದಾನವನ್ನು ೨ ಪಟ್ಟು ಜಾಸ್ತಿ ಮಾಡಲಾಗುವುದೆ ;

(ಈ) ಈ ವರ್ಷದಲ್ಲಿ ಹೊಸ ಯೋಜನೆ ಏನಾದರೂ ಜಾರಿಗೆ ತರಲಾಗುವುದೇ ?

## ವಿವಿಧ ಬಗೆಯ ವಾಹನಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೯೨ (೮೭೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ದ್ವಿಚಕ್ರ, ತ್ರಿಚಕ್ರ, ನಾಲ್ಕು ಚಕ್ರ ಮತ್ತು ಆರು ಚಕ್ರದ ವಾಹನಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು, ವಾಹನವಾರು ವಿವರ ನೀಡುವುದು) ;

(ಆ) ಈ ವಾಹನಗಳ ಒಟ್ಟು ಸಂಖ್ಯೆಯ ನಿಖರ ಮಾಹಿತಿಯನ್ನು ಪಡೆಯಲು ಸರ್ಕಾರದಲ್ಲಿ ಇರುವ ಮೂಲಗಳು ಯಾವುವು ;

(ಇ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನೋಂದಾವಣೆಗೊಂಡ ವಾಹನಗಳ ಸಂಖ್ಯೆ ಎಷ್ಟು (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಈ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಂತೆ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಛೇರಿ ತೆರೆಯುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ಕೆ.ಎಸ್.ಆರ್.ಟಿ.ಸಿ. ಬಸ್ಸು ನಿಲ್ದಾಣಗಳಿಲ್ಲದ ಜಿಲ್ಲೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೬೯೩ (೮೭೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸು ನಿಲ್ದಾಣಗಳಿಲ್ಲದ ಜಿಲ್ಲೆಗಳು ಯಾವುವು ; ಈ ಜಿಲ್ಲೆಗಳಲ್ಲಿ ಬಸ್ಸು ನಿಲ್ದಾಣವನ್ನು ನಿರ್ಮಿಸಲು ಇರುವ ತೊಡಕುಗಳೇನು ; ಈ ತೊಡಕುಗಳನ್ನು ನಿವಾರಿಸಿ ಯಾವಾಗ ಬಸ್ಸು ನಿಲ್ದಾಣಗಳನ್ನು ರಚಿಸುವ ಯೋಜನೆ ರೂಪಿಸಲಾಗುವುದು ;

(ಆ) ಉಡುಪಿ ಜಿಲ್ಲೆಯ, ಉಡುಪಿ ನಗರಸಭೆಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸು ನಿಲ್ದಾಣಕ್ಕೆ ಸ್ಥಳ ಕಾಯ್ದಿರಿಸಲಾಗಿದೆಯೇ ; ಕಾಯ್ದಿರಿಸಿದ್ದಲ್ಲಿ,

ಯಾವ ಸರ್ವೆ ನಂಬರಿನಲ್ಲಿ ಎಷ್ಟು ವಿಸ್ತೀರ್ಣದ ಸ್ಥಳವನ್ನು ಕಾಯ್ದಿರಿಸಲಾಗಿದೆ ; ಯಾವ ಇಲಾಖೆಯಿಂದ ಈ ಸ್ಥಳವನ್ನು ಪಡೆಯಲಾಗಿದೆ ;

(ಇ) ಉಡುಪಿ ಜಿಲ್ಲಾ ಕೇಂದ್ರದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸು ನಿಲ್ದಾಣವನ್ನು ಯಾವಾಗ ನಿರ್ಮಿಸಲಾಗುವುದು ; ಅದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ; ಮತ್ತು ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಆಹಾರ ಸುರಕ್ಷತೆ ಮತ್ತು ಗುಣಮಟ್ಟ ನಿಯಂತ್ರಣ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೯೪ (೮೭೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟವನ್ನು ತಪಾಸಣೆ ನಡೆಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಆಹಾರೋತ್ಪಾದನೆ ಮಾಡುವ ಘಟಕಗಳು, ಹೋಟೆಲ್ಲುಗಳು, ಬೀದಿ ಬದಿ ತಳ್ಳುಗಾಡಿ ಇತ್ಯಾದಿಗಳು ವ್ಯಾಪಾರ ಪರವಾನಿಗೆಯನ್ನು ಪಡೆಯುವ ಮತ್ತು ಇಲಾಖೆಯಲ್ಲಿ ನೋಂದಾವಣೆಗೊಳ್ಳುವ ಅವಶ್ಯಕತೆಯಿದೆಯೇ ; ಇದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ನೋಂದಾವಣೆಗೊಂಡವರ ಸಂಖ್ಯೆ ಎಷ್ಟು ;

ಮತ್ತು ನೋಂದಾವಣೆಗೊಳ್ಳಲು ಬಾಕಿ ಇರುವವರ ಸಂಖ್ಯೆ ಎಷ್ಟು (ವರ್ಷವಾರು, ಉದ್ಯಮವಾರು, ಜಿಲ್ಲಾವಾರು ವಿವರ ನೀಡುವುದು) ;

(ಇ) ರಾಜ್ಯದಲ್ಲಿ ಆಹಾರ ಇಲಾಖೆಯಲ್ಲಿ ಇರುವ ಸಿಬ್ಬಂದಿಗಳಿಂದ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ನಿಯಂತ್ರಣದ ಮೇಲೆ ಹತೋಟಿಯನ್ನು ಹೊಂದಲು ಸಾಧ್ಯವಿದೆಯೇ ; ಇಲ್ಲವಾದಲ್ಲಿ ಸರ್ಕಾರದ ಮುಂದಿನ ಕ್ರಮವೇನು ?

## ಸಮುದಾಯ ಆರೋಗ್ಯ ಭವನಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೯೫ (೮೭೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿರುವ ಸಮುದಾಯ ಆರೋಗ್ಯ ಭವನಗಳ ಸಂಖ್ಯೆ ಎಷ್ಟು ; ಅವು ಯಾವುವು (ವಿಧಾನಸಭಾವಾರು ವಿವರ ನೀಡುವುದು) ;

(ಆ) ಈ ಸಮುದಾಯ ಆರೋಗ್ಯ ಭವನಗಳನ್ನು ನಿರ್ಮಿಸಲು ಇರುವ ಮಾನದಂಡವೇನು ;

(ಇ) ಬೈಂದೂರು ವಿಧಾನಸಭಾ ಕ್ಷೇತ್ರದ ಸಿದ್ದಾಪುರ ಮತ್ತು ಕುಂದಾಪುರ ವಿಧಾನಸಭಾ ಕ್ಷೇತ್ರವ ಬಸ್ರೂರಿನಲ್ಲಿ ಸಮುದಾಯ ಆರೋಗ್ಯ ಭವನ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ಪ್ರಾಥಮಿಕ ಆರೋಗ್ಯ ಉಪಕೇಂದ್ರಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೯೬ (೮೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಉಪಕೇಂದ್ರಗಳ ಸಂಖ್ಯೆ ಎಷ್ಟು ; ಅವು ಯಾವುವು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಈ ಉಪಕೇಂದ್ರಗಳಲ್ಲಿ ಹೆಚ್ಚಿನವು ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಉಪಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಸಂಖ್ಯೆ ಎಷ್ಟು ; ಕೊರತೆ ಇರುವ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಈ ಆರೋಗ್ಯ ಉಪ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುವ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯವರು ಕೇಂದ್ರ ಸ್ಥಾನದಲ್ಲೇ ವಾಸ್ತವ್ಯವಿರಬೇಕೆನ್ನುವ ನಿಯಮವಿದೆಯೇ ; ಇದ್ದಲ್ಲಿ, ಉಡುಪಿ ಜಿಲ್ಲೆಯಲ್ಲಿ ಇರುವ ಪ್ರಾಥಮಿಕ ಆರೋಗ್ಯ ಉಪಕೇಂದ್ರಗಳಲ್ಲಿ ವಾಸ್ತವ್ಯವಿರುವ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಸಂಖ್ಯೆ ಎಷ್ಟು (ತಾಲ್ಲೂಕುವಾರು, ಪ್ರಾಥಮಿಕ ಆರೋಗ್ಯ ಉಪ ಕೇಂದ್ರವಾರು ವಿವರ ನೀಡುವುದು) ?

## ಮೊರಾರ್ಜಿ ವಸತಿ ಶಾಲೆಗಳ ಖಾಯಂ ನೌಕರರುಗಳ ಜೇಷ್ಠತಾ ಪಟ್ಟಿ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೬೯೭ (೮೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆವಾರು ಮತ್ತು ವಿಷಯವಾರು ಖಾಯಂ ನೌಕರರುಗಳ ನಿಖರವಾದ ಸಂಖ್ಯೆ ಎಷ್ಟು (ನೌಕರರುಗಳ ಜೇಷ್ಠತಾ ಪಟ್ಟಿಯ ಸಂಪೂರ್ಣ ವಿವರ ನೀಡುವುದು) ?

## ಬೆಳಗಾವಿ ವಿಭಾಗದಲ್ಲಿ ಬಸ್ಸುಗಳ ವಾಹನ ಚಾಲಕ–ನಿರ್ವಾಹಕರ ಕೊರತೆಯಿಂದ ಹೊಸ ರೂಟ್‌ಗಳನ್ನು ಕಲ್ಪಿಸದೇ ಇರುವ ಬಗ್ಗೆ ಹಾಗೂ ನಿಷ್ಕ್ರಿಯವಾದ ಬಸ್ಸುಗಳನ್ನು ಓಡಿಸುವುದನ್ನು ನಿಲ್ಲಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೯೮ (೮೨೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದಲ್ಲಿ ಬಸ್ಸುಗಳ ಹಾಗೂ ವಾಹನ ಚಾಲಕ–ನಿರ್ವಾಹಕರ ಕೊರತೆಯಿಂದ ಅತೀ ಅವಶ್ಯವಿರುವ ಹೊಸ ರೂಟ್ ಸಾರಿಗೆ ಸಂಪರ್ಕ ಕಲ್ಪಿಸದೇ ಇರುವ ಸಂಗತಿ ನಿಜವೇ ;

(ಆ) ಕಳೆದ ವರ್ಷ ಬಸ್ಸು ಹಾಗೂ ವಾಹನ ಚಾಲಕ–ನಿರ್ವಾಹಕರ ಬಗ್ಗೆ ಎಷ್ಟು ಬೇಡಿಕೆ ಇತ್ತು ; ಹಾಗೂ ಬೇಡಿಕೆಗನುಗುಣವಾಗಿ ಎಷ್ಟು ಬಸ್ಸು ಹಾಗೂ ವಾಹನ ಚಾಲಕ–ನಿರ್ವಾಹಕರನ್ನು ಪೂರೈಸಲಾಗಿದೆ (ಘಟಕವಾರು ಮಾಹಿತಿ ನೀಡುವುದು) ;

(ಇ) ನಿಷ್ಕ್ರಿಯವಾದ ವಾಹನಗಳನ್ನು ಹಾಗೂ ಹಳೆಯ ವಾಹನಗಳನ್ನು ಬೆಳಗಾವಿ ವಿಭಾಗದ ಬೈಲಹೊಂಗಲ, ಸವದತ್ತಿ ಹಾಗೂ ಬೇರೆ ಘಟಕಗಳಲ್ಲಿ ಓಡಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಿಂದಿನ ಅಧಿವೇಶನದಲ್ಲಿ ಬೆಳಗಾವಿ ವಿಭಾಗದ ಬೈಲಹೊಂಗಲ, ಘಟಕದಿಂದ ಬೈಲಹೊಂಗಲ–ಶಿವಯೋಗ ಮಂದಿರ ವಯಾ ಮುನವಳ್ಳಿ ಮಾರ್ಗವಾಗಿ ಹೊಸ ಬಸ್ ಸಂಚಾರ ಒದಗಿಸುವುದಾಗಿ ಆಶ್ವಾಸನೆ ನೀಡಿದ್ದು, ಇದುವರೆಗೂ ವಾಹನ ಪ್ರಾರಂಭವಾಗದೇ ಇರುವುದರಿಂದ ಕೂಡಲೇ ಈ ಸಾರಿಗೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಮಹಿಳಾ ಕಾರ್ಮಿಕ ವರ್ಗಕ್ಕೆ ಸಾರಿಗೆ ಸಂಸ್ಥೆಯಿಂದ ಸೌಲಭ್ಯಗಳು

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೯೯ (೮೨೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಬೆಂಗಳೂರು ಮಹಾನಗರದ ಸುತ್ತಮುತ್ತಲಿನ ಕೈಗಾರಿಕಾ ಪ್ರದೇಶ ಹಾಗೂ ರಾಜ್ಯದ ಇತರೆ ಭಾಗಗಳಲ್ಲಿ ಮಹಿಳಾ ಕಾರ್ಮಿಕರಾಗಿ ಗಾರ್ಮೆಂಟ್ಸ್ ಮತ್ತು ಇತರೆ ಕಾರ್ಖಾನೆಗಳಲ್ಲಿ ಪಾಳಿ ಪದ್ಧತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳೆಯರಿಗಾಗಿ ಸಾರಿಗೆ ಸಂಸ್ಥೆ ವತಿಯಿಂದ ಈವರೆಗೆ ಒದಗಿಸಿರುವ ಅನುಕೂಲತೆಗಳೇನು ;

(ಆ) ಪಾಳಿ ಪದ್ಧತಿಯಲ್ಲಿ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಸಂಖ್ಯೆಗನುಗುಣವಾಗಿ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆಯೇ ;

(ಇ) ಈ ರೀತಿ ಮಹಿಳಾ ಕಾರ್ಮಿಕರಾಗಿ ಕೈಗಾರಿಕಾ ಪ್ರದೇಶಗಳ ಕಾರ್ಖಾನೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳೆಯರಿಗೆ ರಿಯಾಯಿತಿ ದರದಲ್ಲಿ ಮತ್ತು ಮಹಿಳಾ ಕಾರ್ಮಿಕರಿಗಾಗಿಯೇ ವಿಶೇಷ ಸಾರಿಗೆ ಅನುಕೂಲತೆ ಒದಗಿಸಲು ಇಲಾಖೆಗಿರುವ ಸಮಸ್ಯೆಗಳೇನು (ಹೆಚ್ಚಿನ ವಿವರಗಳನ್ನು ಒದಗಿಸುವುದು) ?

## ಹಿಂದುಳಿದ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಸಾಲ ನೀಡಿಕೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೦ (೮೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳ ಅವಧಿಯಲ್ಲಿ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಶೈಕ್ಷಣಿಕ ವಿದ್ಯಾಭ್ಯಾಸಕ್ಕಾಗಿ ಸರ್ಕಾರವು ರೂಪಿಸಿದ ಯೋಜನೆಗಳು ಯಾವುವು (ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಆ) ಇವರುಗಳ ವಿದ್ಯಾಭ್ಯಾಸಕ್ಕಾಗಿ ಒದಗಿಸಲಾದ ಸಾಲ ಸೌಲಭ್ಯದ ಪ್ರಮಾಣ ಎಷ್ಟು ; ಸಾಲ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಅನುಸರಿಸುತ್ತಿರುವ ಮಾರ್ಗಸೂಚಿ, ನಿಯಮಗಳು ಯಾವುವು (ವರ್ಷಾವಾರು ಸಂಪೂರ್ಣ ವಿವರ ಒದಗಿಸುವುದು) ;

(ಇ) ಒದಗಿಸಲಾದ ಸಾಲವನ್ನು ಮರು ಪಾವತಿ ಮಾಡುವ ನಿಬಂಧನೆ ಇದೆಯೇ ; ಹಾಗಿದ್ದಲ್ಲಿ, ಕಳೆದ ೫ ವರ್ಷಗಳ ಅವಧಿಯಲ್ಲಿ ನೀಡಿಕೆಯಾದ ಸಾಲ ಮತ್ತು ಇದುವರೆವಿಗೆ ಮರುಪಾವತಿಗೊಂಡ ಹಣ ಎಷ್ಟು (ಪ್ರತ್ಯೇಕ ಮಾಹಿತಿ ಒದಗಿಸುವುದು) ;

(ಈ) ವಿದ್ಯಾರ್ಥಿಗಳ ವಿದ್ಯಾಭ್ಯಾಸದ ದೃಷ್ಟಿಯಿಂದ ಒದಗಿಸಿದ ಸಾಲವನ್ನು ಮನ್ನಾ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಯಾವುವು ?

## ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಾಹೀರಾತುಗಳು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೭೦೧ (೮೨೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಏಪ್ರಿಲ್ ೨೦೧೩ರಿಂದ ಇಲ್ಲಿಯವರೆವಿಗೂ ಯಾವ ಯಾವ ಪತ್ರಿಕೆ/ಮಸ್ತಕ ಅಥವಾ ಇತ್ಯಾದಿಗಳಿಗೆ ಜಾಹೀರಾತು ನೀಡಲಾಗಿದೆ ; ಅದಕ್ಕೆ ತಗುಲಿದ ವೆಚ್ಚ ಎಷ್ಟು ;

(ಆ) ಈ ಪತ್ರಿಕೆ/ಮಸ್ತಕಗಳು ಯಾವ ಯಾವ ಜಿಲ್ಲೆಗಳಲ್ಲಿ ಪ್ರಚಲಿತದಲ್ಲಿವೆ ; ಇದಕ್ಕೆ ಸರ್ಕಾರದಿಂದ ಹಣ ನಿಗದಿಪಡಿಸಲಾಗಿದೆಯೇ ; ಇದ್ದರೆ, ಎಷ್ಟು ಹಣ ನಿಗದಿಪಡಿಸಲಾಗಿದೆ ;

(ಇ) ಇದರ ಮಂಜೂರಾತಿಗಾಗಿ ಅಂತಿಮವಾಗಿ ಯಾರ ಅನುಮತಿ ಪಡೆಯಬೇಕು ; ಜಾಹೀರಾತುಗಳಿಗೆ ನೀಡಬಹುದಾದ ಕನಿಷ್ಠ ಮತ್ತು ಗರಿಷ್ಠ ಹಣ ಎಷ್ಟು ; ಗರಿಷ್ಠ ಮಂಜೂರಾತಿಯನ್ನು ಮೀರಿ ಹಣ ಮಂಜೂರಾದ ಉದಾಹರಣೆಗಳು ಇವೆಯೇ ; ಇದರಲ್ಲಿ ಲೋಪ-ದೋಷಗಳು ಕಂಡು ಬಂದಿವೆಯೇ ; ಇದ್ದಲ್ಲಿ ಲೋಪ-ದೋಷ ಎಸಗಲು ಕಾರಣರಾದವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಈ) ಜಾಹೀರಾತುಗಳಿಗೆ ಹಣ ಖರ್ಚು ಮಾಡುವುದರಿಂದ ನಿಗಮಕ್ಕೆ ಯಾವ್ಯಾವ ರೀತಿ ಪ್ರಯೋಜನವಾಗಿದೆ (ಸವಿವರವಾದ ವಿವರಣೆ ನೀಡುವುದು) ;

(ಉ) ಒಂದೇ ಪತ್ರಿಕೆ/ಪುಸ್ತಕಕ್ಕೆ ಪದೇ ಪದೇ ಹಣ ನೀಡಿರುವುದು ನಿಜವೇ ; ಹೌದಾದಲ್ಲಿ ಯಾವ ಪತ್ರಿಕೆ/ಪುಸ್ತಕಕ್ಕೆ ಎಷ್ಟೆಷ್ಟು ಬಾರಿ, ಎಷ್ಟೆಷ್ಟು ಹಣವನ್ನು ನೀಡಲಾಗಿದೆ ; ಇದಕ್ಕೆ ಕಾರಣವೇನು ; ಈ ರೀತಿ ಪದೇ ಪದೇ ಹಣ ನೀಡುವುದರಿಂದ ಸರ್ಕಾರದ ಹಣ ಪೋಲಾಗುವುದಿಲ್ಲವೇ ; ಇದಕ್ಕೆ ಕಾರಣವಾದ ಅಧಿಕಾರಿ/ನೌಕರರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದೇ (ವಿವರ ನೀಡುವುದು) ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೭೦೨ (೮೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ 'ಬಿ' ದರ್ಜೆಯ ಅಧಿಕಾರಿಗಳ ಹುದ್ದೆ ಸೃಜಿಸಲಾಗಿದೆಯೇ ;

(ಆ) ಮಂಜೂರಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಆಹಾರ ಪದ್ಧತಿ ಸರಬರಾಜು ಪ್ರಕ್ರಿಯೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಇ–ಪ್ರಕ್ಯುರ್‌ಮೆಂಟ್ ಮಾಡಲು ಸಾಧ್ಯವಿದೆಯೇ ;

(ಈ) ಆಯುಕ್ತಾಲಯ ಕಛೇರಿಯಿಂದ ವಿದ್ಯಾರ್ಥಿ ನಿಲಯಗಳಿಗೆ ಬೇಕಾಗುವ ಸಾಮಗ್ರಿಗಳನ್ನು ಕಳೆದ ಸಾಲಿನಲ್ಲಿ ಖರೀದಿಸಿ ಸರಬರಾಜು ಮಾಡಲಾಗಿದೆಯೇ ?

## ಸ್ವಂತ ಕಟ್ಟಡಗಳ ಅಗತ್ಯತೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೭೦೩ (೮೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ತಾಲ್ಲೂಕು ಮಟ್ಟದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಛೇರಿಗಳಿಗೆ ಸ್ವಂತ ಕಟ್ಟಡಗಳಿವೆಯೇ (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು) ;

(ಆ) ಇಲ್ಲವಾದಲ್ಲಿ ಸದ್ಯ ಪ್ರತಿ ತಿಂಗಳು ಪಾವತಿ ಮಾಡುತ್ತಿರುವ ಬಾಡಿಗೆ ವಿವರಗಳನ್ನು ನೀಡುವುದು ;

(ಇ) ಸ್ವಂತ ಕಟ್ಟಡ ಇಲ್ಲದ ಕುರಿತು ಇಲಾಖೆಯವರು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುವರೇ ;

(ಈ) ಸಲ್ಲಿಸಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು ;

(ಉ) ತಾಲ್ಲೂಕು ಮಟ್ಟದ ಕಾರ್ಯಾಲಯಗಳಲ್ಲಿ ಸದ್ಯ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರಗಳನ್ನು ನೀಡುವುದು (ಮಂಜೂರು, ಭರ್ತಿ, ಖಾಲಿ) ; ಖಾಲಿ ಇರುವ ಹುದ್ದೆಗಳು ಎಷ್ಟು ತಿಂಗಳುಗಳಿಂದ ಖಾಲಿ ಇವೆ ;

(ಊ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 03372/1000 ಪ್ರತಿಗಳು/7-7-2014